ಸಂಪಾದಕ:ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳಪತ್ರಿಕೆ www.pavitrapraja.com

# ಪವಿತ್ರ ಪ್ರಜಾ

PAVITRAPRAJA Daily RNI:KARKAN: 2007/22780 ದಿನಪತ್ರಿಕೆ

e-mail:pavitrapraja@gmail.com KA/SK/CTA-806/21-23 Davanagere 9141920642

ಸಂಪುಟ:18 ಸಂಚಿಕೆ: 217 ದಿನಾಂಕ:06-07-2024 ಶನಿವಾರ ಪುಟ:4 ರೂ.2-00 ಉಪಸಂಪಾದಕರು: ಸುಪ್ರಿತ ಎಸ್. ಒಡೆಯರ್ ಎಂಬಿಎ Vol:18 Issuse:217 Date:06-07-2024 Satrday page:4 Rs:2-00 subEditor: Supritha Wadeyar

# ಅಧಿಕಾರಿಗಳಿಗೆ ಸಿಎಂ ಚಾಟಿ

## ಎಸ್‌ಸಿಎಸ್‌ಪಿ, ಟಿಎಸ್‌ಪಿಗೆ ಮೀಸಲಿಟ್ಟ ಹಣ ಬಳಕೆ ನಿರ್ಲಕ್ಷಿಸಿದರೆ ಕಠಿಣ

ಬೆಂಗಳೂರು:–

ಎಸ್‌ಸಿಎಸ್‌ಪಿ ಮತ್ತು ಟಿಎಸ್ ಪಿ ಅಡಿ ನಿಗದಿ ಮಾಡಿರುವ ಅನುದಾನವನ್ನು ಆಯಾ ವರ್ಷವೇ ವೆಚ್ಚ ಮಾಡಬೇಕು. ಈ ವಿಚಾರದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಚಾಟಿ ಬೀಸಿದ್ದಾರೆ.

ಈ ನಿಯಮಗಳನ್ನು ಯಾರೇ ನಿರ್ಲಕ್ಷಿಸಿದರೇ ಅದಕ್ಕೆ ಕ್ಷಮೆಯಿಲ್ಲ. ಕಠಿಣ ಕ್ರಮ ನಿಶ್ಚಿತ ಎಂದು ಅವರು ತಾಕೀತು ಮಾಡಿದ್ದಾರೆ.

ವಿಧಾನಸೌಧದಲ್ಲಿ ಇಂದು ನಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ರಾಜ್ಯ ಅಭಿವೃದ್ಧಿ ಪರಿಷತ್ ಸಭೆ ನಡೆಯಿತು. ಈ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಇಡೀ ದೇಶದಲ್ಲೇ ಕರ್ನಾಟಕದಲ್ಲಿ ಮಾತ್ರ ಎಸ್‌ಸಿಎಸ್ ಪಿ/ಟಿಎಸ್‌ಪಿ ಕಾಯ್ದೆಯನ್ನು ರಾಜ್ಯದಲ್ಲಿ ಮಾತ್ರ ಜಾರಿಗೆ ತರಲಾಗಿದೆ. ಜನಸಂಖ್ಯಾ ಅನುಗುಣವಾಗಿ ಎಸ್‌ಸಿಎಸ್‌ಪಿ ಸಮುದಾಯಕ್ಕೆ




ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಸಭೆ ನಡೆಯಿತು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಹೆಚ್.ಸಿ. ಮಹದೇವಪ್ಪ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯೆಲ್, ಶಾಸಕರುಗಳಾದ ಪ್ರಸಾದ್ ಅಬ್ಬಯ್ಯ, ಬಸಂತಪ್ಪ, ಶ್ರೀನಿವಾಸ್, ನರೇಂದ್ರ ಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

ಹಣ ಒದಗಿಸುತ್ತಿರುವುದು ಕಾಂಗ್ರೆಸ್ ಸರ್ಕಾರಕ್ಕೆ ಮಾತ್ರ. 2024–25ನೇ ಸಾಲಿನಲ್ಲಿ 3912.46 ಕೋಟಿ ಅನುದಾನ ನೀಡಲಾಗಿದೆ. ಕಳೆದ ವರ್ಷ 35221.84 ಕೋಟಿ ರೂ.ನಷ್ಟಿತ್ತು. ಇದರಲ್ಲಿ ಬಿಡುಗಡೆ ವೆಚ್ಚದ ಶೇ. 99.64 ಕೋಟಿಯಷ್ಟು ಮಾತ್ರ ಖರ್ಚಾಗಿದೆ. ಉಳಿದ ಹಣ ಏಕೆ ಖರ್ಚಾಗಿಲ್ಲ ಎಂದು ಅಧಿಕಾರಿಗಳು ಮುಖ್ಯಮಂತ್ರಿಗಳು ಚುರುಕು ಮುಟ್ಟಿಸಿದ್ದಾರೆ.

ಆಯಾ ವರ್ಷವೇ ಶೇ. 100 ರಷ್ಟು ಖರ್ಚು ಮಾಡಬೇಕೆಂಬ ಕಾನೂನುನನ್ನು ಜಾರಿಗೆ ಮಾಡಿದ್ದೇವೆ ಖರ್ಚು ಮಾಡದಿದ್ದರೆ, ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಬೇಕು ಎಂಬ ನಿಯಮವನ್ನು ಮಾಡಿದ್ದೇವೆ. ಯಾರು ನಿರ್ಲಕ್ಷ್ಯ ಮಾಡಿದ್ದಾರೆ ಅವರ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿಗಳು ತಾಕೀತು ಮಾಡಿದ್ದಾರೆ.ಈ ಹಿಂದೆ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಎಸ್‌ಸಿಎಸ್ ಪಿ/ಟಿಎಸ್‌ಪಿ ಕಾಯ್ದೆಯನ್ನು 2013ರಲ್ಲಿ ಜಾರಿಗೆ ತಂದಿದ್ದೇವೆ. ಸರ್ಕಾರದ ಒಟ್ಟಾರೆ ಅಭಿವೃದ್ಧಿ ಅಯವ್ಯಯದ ಶೇ. 74.1ರಷ್ಟು ಈ ಸಮುದಾಯದ ಅಭಿವೃದ್ಧಿಗೆ ವೆಚ್ಚಮಾಡಲಾಗುತ್ತಿದೆ. 2024–25ನೇ ಸಾಲಿನಲ್ಲಿ ಎಸ್‌ಸಿಎಸ್ ಪಿ/ಟಿಎಸ್‌ಪಿ ಅಡಿ ಒಟ್ಟಾರೆ 39,121.46 ಕೋಟಿ ಅನುದಾನ ಒದಗಿಸಲಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಶೇ. 11 ರಷ್ಟು ಅಂದರೆ 3,897 ಕೋಟಿ ಹೆಚ್ಚಳವಾಗಿದೆ. ಎಸ್‌ಸಿಎಸ್ ಪಿ ಯೋಜನೆಯಡಿ 27,673.96 ಕೋಟಿ ರೂ. ಟಿಎಸ್‌ಪಿ ಯಡಿ 11.447.50 ಕೋಟಿ ರೂ. ಒದಗಿಸಲಾಗಿದೆ ಎಂದು ಹೇಳಿದರು.ಈ ವರ್ಷದ ಕ್ರಿಯಾಯೋಜನೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ 8,480 ಕೋಟಿ ರೂ. ಸಮಾಜ ಕಲ್ಯಾಣ ಇಲಾಖೆಗೆ 4,174, ಕಂದಾಯ ಇಲಾಖೆ 3,403, ಗ್ರಾಮೀಣ ಅಭಿವೃದ್ಧಿ ಇಲಾಖೆ 3,163 ಕೋಟಿ ರೂ. ಒದಗಿಸಲಾಗಿದೆ.ಈ ಅನುದಾನ ಯಾವುದೇ ಕಾರಣಕ್ಕೂ ಬಳಕೆಯಾಗಿದೆ ಉಳಿಯಬಾರದು ಅದೇ ವರ್ಷ ಖರ್ಚಾಗಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ನಿಗಮಗಳಲ್ಲಿ ಹಣ ವೆಚ್ಚವಾಗಿಲ್ಲ. ಇದಕ್ಕೆ ಶಾಸಕರು ಪಟ್ಟಿ ಕೊಡಲಿಲ್ಲ ಎಂಬ ಕಾರಣ ನೀಡುತ್ತಿರುವುದಕ್ಕೆ ಮುಖ್ಯಮಂತ್ರಿಗಳು ಅಸಮಾಧಾನ ಹೊರಹಾಕಿದ್ದಾರೆ ಎಂದು ಮೂಲಗಳು ತಿಳಿಸಿವೆ.ಫಲಾನುಭವಿಗಳ ಪಟ್ಟಿ ಒದಗಿಸುವಂತೆ ಅಧಿಕಾರಿಗಳು ನಿಗಮಗಳ ಅಧ್ಯಕ್ಷರು ಹಾಗೂ ಸಂಧಿಸಿದ ಸಚಿವರು, ಶಾಸಕರ ಮನವೊಲಿಸಬೇಕು ಎಂದು ತಾಕೀತು ಮಾಡಿರುವ ಮುಖ್ಯಮಂತ್ರಿಗಳು ಈ ಯೋಜನೆಗಳ ಮೌಲ್ಯಮಾಪನದಿಂದ ಶೇ. 65 ರಷ್ಟು ಉಪಯೋಗವಾಗಿರುವುದು ಕಂಡು ಬರುತ್ತದೆ ಎಂದು ಹೇಳಿದ್ದಾರೆ.ಸಭೆಯಲ್ಲಿ ಸಚಿವರುಗಳು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯೆಲ್ ಹಿರಿಯ ಆದಿಕಾರಿಗಳು ಪಾಲ್ಗೊಂಡಿದ್ದರು.

## ಬಯಲು ಸೀಮೆ, ಮಳೆಯಾಶ್ರಿತ ಜಗಳೂರು ತಾಲ್ಲೂಕಿನ 47 ಕೆರೆಗಳಿಗೆ ನೀರು ತುಂಬಿಸುವ ಯೋಜನೆ, ಮುಂಗಾರಿನಲ್ಲಿ 30 ಕೆರೆಗಳಿಗೆ ನೀರು



ದಾವಣಗೆರೆ:–

ತುಂಗಭದ್ರಾ ನದಿಯಿಂದ ಜಗಳೂರು ತಾಲ್ಲೂಕಿನ 47 ಹಾಗೂ ಹರಪನಹಳ್ಳಿ ತಾಲ್ಲೂಕಿನ 6 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಮುಕ್ತಾಯ ಹಂತದಲ್ಲಿದ್ದು ಮುಂಗಾರಿನಲ್ಲಿ 30 ಕೆರೆಗಳಿಗೆ ನೀರು ತುಂಬಿಸಲು ಪ್ರಾಯೋಗಿಕ ಹರಿವು ಆರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಗುರುವಾರ ತುಂಗಭದ್ರಾ ನದಿಗೆ ದೀಟೂರು ಬಳಿ ನಿರ್ಮಿಸಿರುವ ಪಂಪ್ ಹೌಸ್ ಮತ್ತು ಜಗಳೂರು –3ನೇ ಪುಟಕ್ಕೆ

## ರಿಷಿ ಸುನಕ್‌ಗೆ ಮುಖಭಂಗ, ಸ್ಟಾರ್ಮರ್ ನೂತನ ಪ್ರಧಾನಿ



ಲಂಡನ್:–

ಬ್ರಿಟನ್‌ನಲ್ಲಿ ನಡೆದ ಸಂಸತ್ ಚುನಾವಣೆಯಲ್ಲಿ 14 ವರ್ಷಗಳ ಬಳಿಕ ಲೇಬರ್ ಪಾರ್ಟಿ ಇಂಗ್ಲೆಂಡ್ ಸಂಸತ್ತಿನಲ್ಲಿ ಭಾರಿ ಬಹುಮತ ಪಡೆದು ಅಧಿಕಾರ ಹಿಡಿಯುವತ್ತ ಹೆಜ್ಜೆ ಹಾಕಿದೆ. ಈ ಮೂಲಕ ಮತ್ತೊಮ್ಮೆ ಪ್ರಧಾನಿ ಆಗಬೇಕು ಎನ್ನುವ ಕನ್ಸರ್ವೇಟಿವ್ ಪಕ್ಷದ ನಾಯಕ ಹಾಲಿ ಪ್ರಧಾನಿ ರಿಷಿ ಸುನಕ್‌ಗೆ ಹಿನ್ನಡೆಯಾಗಿದೆ.

ನಿರ್ಗಮಿತ ಪ್ರಧಾನಿ ರಿಷಿಸುನಕ್ ಅವರು ರಿಚ್ಮಂಡ್ ಮತ್ತು ನಾರ್ತಲರ್ಟನ್ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದಾರೆ. ಚುನಾವಣೆಯಲ್ಲಿ ಲೇಬರ್ ಪಾರ್ಟಿ ಜಯಗಳಿಸಿದ್ದು, ಕೀರ್ ಸ್ಟಾರ್‌ಗೆ ಅಭಿನಂದನೆ –3ನೇ ಪುಟಕ್ಕೆ

## ನಾಯಕತ್ವದ ಗುಣ ಪ್ರತಿಯೊಬ್ಬ ಮಹಿಳೆಯರಲ್ಲೂ ಇರಬೇಕು: ಎಸ್ಪಿ ಉಮಾ ಪ್ರಶಾಂತ್



ದಾವಣಗೆರೆ:–

ಪದವಿ ಶಿಕ್ಷಣದ ಮೂರು ವರ್ಷದ ಅವಧಿಯಲ್ಲಿ ವಿದ್ಯಾರ್ಥಿಗಳು ನಿಗಧಿತವಾದ ಪಠ್ಯಕ್ರಮಗಳನ್ನಷ್ಟೇ ಓದದೆ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತಿಳಿಸಿದುಕೊಳ್ಳಬೇಕು ಎಂದು ಎಸ್ಪಿ ಉಮಾ ಪ್ರಶಾಂತ್ ಹೇಳಿದರು. ನಗರದ ಎವಿ ಕಮಲಮ್ಮ ಕಾಲೇಜಿನಲ್ಲಿ ವಿದ್ಯಾರ್ಥಿ ಸಂಘ, ಸಾಂಸ್ಕೃತಿಕ ಸಮಿತಿ ಹಾಗೂ ಕ್ರೀಡಾ ಸಮಿತಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಕಾಲೇಜಿನ ವಾರ್ಷಿಕೋತ್ಸವದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ಪದವಿ ಮುಗಿದ ಮೇಲೆ ಕೆಎಎಸ್, ಐಪಿಎಸ್ ತೆಗೆದುಕೊಳ್ಳಲು ಅವಕಾಶ ಇರುತ್ತದೆ. ಪದವಿ ಶಿಕ್ಷಣದ ಮೂರು ವರ್ಷದ ಅವಧಿಯಲ್ಲಿ ವಿ ದ್ಯಾ ರ್ಥಿ ಗ ಳ –3ನೇ ಪುಟಕ್ಕೆ

## ಕೋಚಿಮುಲ್ ನಿಂದ ಪ್ರತಿಲೀಟರ್ ಹಾಲಿಗೆ 2ರೂ. ಕಡಿತ

ಬೆಂಗಳೂರು:–

ಒಂದೆಡೆ ರಾಜ್ಯದಲ್ಲಿ ಹಾಲು ಉತ್ಪಾದನೆ ಹೆಚ್ಚಳ ಆಗುತ್ತಿದೆ. ಆದರೆ, ಮತ್ತೊಂದೆಡೆ, ರೈತರಿಂದ ಖರೀದಿಸುವ ಹಾಲಿನ ದರವನ್ನು ಇಂದಿನಿಂದ ಲೀಟರ್‌ಗೆ 2 ಕಡಿತಗೊಳಿಸಿ ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಹಾಲು ಒಕ್ಕೂಟ (ಕೋಚಿಮುಲ್) ಆದೇಶ ಹೊರಡಿಸಿದೆ. ಈ ಆದೇಶ ಇಂದು ಬೆಳಗ್ಗೆಯಿಂದಲೇ ಜಾರಿಗೆ ಬರಲಿದ್ದು, ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಗಳ ಹೈನುಗಾರರಿಗೆ ಆರ್ಥಿಕ ಹೊಡೆತ ಬೀಳಲಿದೆ. ಇದುವರೆಗೆ ಹಾಲು ಉತ್ಪಾದಕರಿಗೆ ಲೀಟರ್ ಹಾಲಿಗೆ 33.40 ಹಾಗೂ ಸಂಘಗಳಿಗೆ 35.85 ಸಿಗುತಿತ್ತು.ಲೀಟರ್‌ಗೆ 2 ಕಡಿಮೆ ಆಗಿರುವುದರಿಂದ ಇನ್ನು ಮುಂದೆ ರೈತರಿಗೆ 31.40 ಹಾಗೂ ಸಂಘಗಳಿಗೆ 33.85 ಸಿಗಲಿದೆ. ಗುರುವಾರ ನಡೆದ ಕೋಚಿಮುಲ್ ಆಡಳಿತ ಮಂಡಳಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಒಕ್ಕೂಟದ ಹಾಲು ಶೇಖರಣೆ ಹಾಗೂ ಆರ್ಥಿಕ ಪರಿಸ್ಥಿತಿ ಕುರಿತು ಚರ್ಚಿಸಿ 2 ಕಡಿತಗೊಳಿಸಲಾಗಿದೆ. ಮಳೆಗಾಲದಲ್ಲಿ ಹಾಲಿನ ಉತ್ಪಾದನೆ ಹೆಚ್ಚಾಗಿರುವ ಕಾರಣ ದರ ಕಡಿಮೆ ಮಾಡುವುದು ಸಹಜ ಎಂದು ಕೋಚಿಮುಲ್ ಅಧಿಕಾರಿಗಳು ಸಮರ್ಥಿಸಿಕೊಂಡಿದ್ದಾರೆ. ಹಾಲಿನ ಪುಡಿ ದರ ಕಡಿಮೆಯಾಗಿದ್ದು, ಖರೀದಿಸುವವರೂ ಇಲ್ಲ. ಹೀಗಾಗಿ, ಹಾಲು ತಮ್ಮಲ್ಲೇ ಉಳಿಯುತ್ತಿದೆ ಎಂದಿದ್ದಾರೆ. ಇಂದಿನಿಂದ ಪರಿಷ್ಕೃತ ದರ ಜಾರಿಗೆ ಬರಲಿದೆ. ಈ ವಿಚಾರವನ್ನು ಹಾಲು ಉತ್ಪಾದಕರಿಗೆ ಮನವರಿಕೆ ಮಾಡಬೇಕು. ಹಾಲು ಶೇಖರಣೆ ಮತ್ತು ಗುಣಮಟ್ಟ ಹೆಚ್ಚಿಸಲು ಕ್ರಮ ವಹಿಸಬೇಕು ಎಂದು ಉಲ್ಲೇಖಿಸಿದರು.

## ಜೀವನ ಶೈಲಿಯಲ್ಲಿನ ಬದಲಾವಣೆಯಿಂದ ಬೆನ್ನು ನೋವು ನಿವಾರಣೆ; ಡಾಜೆ ರಘುಕುಮಾರ್



ದಾವಣಗೆರೆ:–

ಪ್ರತಿ ನಿತ್ಯ ನಿಯಮಿತ ವ್ಯಾಯಾಮ, ಸಮತೋಲಿತ ಆಹಾರ ಬಳಕೆ ಮತ್ತು ಜೀವನ ಶೈಲಿಯಲ್ಲಿನ ಬದಲಾವಣೆಯಿಂದ ಬೆನ್ನು ನೋವು ಬರದಂತೆ ನೋಡಿಕೊಳ್ಳಬಹುದು ಎಂದು ಜೆಜೆಎಂ ವೈದ್ಯಕೀಯ ಮಹಾ ವಿದ್ಯಾಲಯದ ಕೀಲುಮೂಳೆ ವಿಭಾಗದ ಪ್ರಾಧ್ಯಾಪಕ ಡಾ. ಜೆ. ರಘುಕುಮಾರ್ ತಿಳಿಸಿದರು. ಬಾಪೂಜಿ ಮಕ್ಕಳ ಆರೋಗ್ಯ ಸಂಸ್ಥೆ ಮತ್ತು ಸಂಶೋಧನಾ ಕೇಂದ್ರದಲ್ಲಿ ನಡೆದ ವಿವೇಕ್ ಪೋಷಕರ ಆರೋಗ್ಯ ಕಾರ್ಯಾಗಾರದಲ್ಲಿ ವಯಸ್ಕರನ್ನು ಕಾಡುವ ಬೆನ್ನುನೋವು– ಕಾರಣ– ಚಿಕಿತ್ಸೆ ಮತ್ತು ಪರಿಹಾರ ವಿಷಯ ಕುರಿತು ಮಾತನಾಡಿದ ಅವರು, ಬೆನ್ನುನೋವು ಒಂದು ಅತಿ ಸಾಮಾನ್ಯವಾದ ಆರೋಗ್ಯ ಸಮಸ್ಯೆ. ಯಾವುದೇ ಸಮಸ್ಯೆ ಬರದಂತೆ ನೋಡಿಕೊಳ್ಳುವುದು ಅತೀ ಮುಖ್ಯ. ಅದೇ ರೀತಿ ಬೆನ್ನು ನೋವು ಬರದಂತೆ ನಿಯಮಿತ ವ್ಯಾಯಾಮ, –3ನೇ ಪುಟಕ್ಕೆ

## ಮಂಗಳೂರು: ಡೆಂಘಿ ಜ್ವರ, ಸೊಳ್ಳೆ ಉತ್ಪತ್ತಿ ತಾಣ ನಾಶಪಡಿಸುವ ಜಾಗೃತಿ ಅಭಿಯಾನಕ್ಕೆ ಚಾಲನೆ

ಮಂಗಳೂರು:–

ಡೆಂಘಿ ಜ್ವರಕ್ಕೆ ಕಾರಣವಾಗುವ ಈಡಿಸ್ ಸೊಳ್ಳೆ ಉತ್ಪತ್ತಿ ತಾಣಗಳ ನಾಶಪಡಿಸುವ ಬೃಹತ್ ಅಭಿಯಾನಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಂಗಳೂರಿನಲ್ಲಿ ಇಂದು ಚಾಲನೆ ನೀಡಿದರು. ಮಂಗಳೂರಿನಲ್ಲಿ ಆರೋಗ್ಯ ಕಾರ್ಯಕರ್ತರೊಂದಿಗೆ ಮನೆಗಳಿಗೆ ಭೇಟಿ ನೀಡಿದ ಸಚಿವರು, ನೀರು ನಿಂತ ಸ್ಥಳಗಳಲ್ಲಿ ಈಡಿಸ್ ಸೊಳ್ಳೆಯ ಉತ್ಪತ್ತಿ ತಾಣಗಳನ್ನ ಪರಿಶೀಲಿಸಿದರು.

ಮನೆಗಳ ಅಕ್ಕಪಕ್ಕದಲ್ಲಿರುವ ತೆಂಗಿನ ಚಿಪ್ಪು, ಟಬ್ ಗಳು, ಟಯರ್ ಸೇರಿದಂತೆ ಮನೆಯ ಮಹಡಿ ಮೇಲೆ ನಿಂತಿರುವ ನೀರಿನಲ್ಲಿ ಈಡಿಸ್ ಸೊಳ್ಳೆಯ ಲಾರ್ವಾಗಳು ಉತ್ಪತ್ತಿಯಾಗಿರುವ ಸ್ಥಳಗಳನ್ನ ಪರಿಶೀಲಿಸಿದ ಸಚಿವರು, ಲಾರ್ವಾ ನಾಶಪಡಿಸಲು ಆರೋಗ್ಯ ಇಲಾಖೆ ಸಿಬ್ಬಂದಿಗಳು ಕೈಗೊಳ್ಳುತ್ತಿರುವ ಕ್ರಮಗಳನ್ನ ವೀಕ್ಷಿಸಿದರು. ಈ ಬಗ್ಗೆ ಎಚ್ಚರಿಕೆ ವಹಿಸುವಂತೆ ಸ್ಥಳೀಯ ನಿವಾಸಿಗಳಿಗೆ ಸಲಹೆ ನೀಡಿದರು.



ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ದಿನೇಶ್ ಗುಂಡೂರಾವ್, ಡೆಂಗಿ ನಿಯಂತ್ರಣ–ಕ್ಕೆ ಈಡಿಸ್ ಸೊಳ್ಳೆಯ ಉತ್ಪತ್ತಿ ತಾಣಗಳನ್ನ ನಾಶಪಡಿಸುವ ನಿಟ್ಟಿನಲ್ಲಿ ಪ್ರತಿ ಶುಕ್ರವಾರ ಆರೋಗ್ಯ ಇಲಾಖೆ ಅಭಿಯಾನದ ರೀತಿಯಲ್ಲಿ ಕಾರ್ಯಕ್ರಮವನ್ನ ಹಾಕಿಕೊಂಡಿದೆ. ಸಾರ್ವಜನಿಕರು ಇಲಾಖೆಯೊಂದಿಗೆ ಕೈಜೋಡಿಸಬೇಕು. ಆರೋಗ್ಯ ಸಿಬ್ಬಂದಿಗಳು ಪ್ರತಿ ಮನೆಗಳಿಗೆ ತೆರಳಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿದ್ದಾರೆ. ಜನರು ತಮ್ಮ ಮನೆಯ ಸುತ್ತಮುತ್ತಲಿನ ಸ್ಥಳಗಳಲ್ಲಿ ನೀರು –3ನೇ ಪುಟಕ್ಕೆ

# ಮಾಮೇರು ಸಮಾರಂಭದಲ್ಲಿ ರಾಧಿಕಾ ಮಿಂಚಿಂಗ್






ಮುಂಬೈ:- ಅಂಬಾನಿ ಕುಟುಂಬದಲ್ಲಿ ಸಂತಸದ ವಾತಾವರಣ ಮೂಡಿದೆ. ಅನಂತ್ ಅಂಬಾನಿ ಮದುವೆ ಸಮಾರಂಭ ವಿಜೃಂಭಣೆಯಿಂದ ಆರಂಭವಾ ಗಿದೆ. ಜುಲೈ 12 ರಂದು ಅನಂತ್ ಮತ್ತು ರಾಧಿಕಾ ವಿವಾಹವಾಗಲಿದ್ದಾರೆ. ಮದು ವೆಯ ಪೂರ್ವ ವಿಧಿವಿ ಧಾನಗಳು ಸಡಗರ ದಿಂದ ಆರಂಭವಾಗಿದೆ. ಜುಲೈ 2 ರಂದು 50 ಜೋಡಿಗಳ ಸಾಮೂ ಹಿಕ ವಿವಾಹದೊಂದಿಗೆ ಆರಂಭವಾದ ವಿವಾಹ ವಿಧಿವಿಧಾನಗಳು ಬುಧವಾರ ಮಾಮೇರು ಕಾರ್ಯಕ್ರಮದೊಂದಿಗೆ ಮುಕ್ತಾಯಗೊಂಡಿದ್ದಾವೆ. ಗುಜರಾತಿ ಕುಟುಂಬಗಳಲ್ಲಿ, ಮಾಮೇರು ಆಚರಣೆಯ ಸಮಯದಲ್ಲಿ, ತಾಯಿಯ ಕಡೆಯಿಂದ ಜನರು ಬಂದು ವಧುವರರನ್ನು ಆಶೀರ್ವದಿಸುತ್ತಾರೆ. ಈ ಸಮಯದಲ್ಲಿ, ವಧುವಿಗೆ ಸೀರೆ, ಆಭರಣ ಮತ್ತು ಬಟ್ಟೆಗಳನ್ನು ಉಡುಗೊರೆ-ಯಾಗಿ ನೀಡಲಾಗುತ್ತದೆ. ಈ ಆಚರಣೆಯು ದೆಹಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಡೆಯುವ ಭಾತ್ ಆಚರಣೆಯನ್ನು ಹೋಲುತ್ತದೆ. ಈ ಸಂದರ್ಭದಲ್ಲಿ, ರಾಧಿಕಾ ತಮ್ಮ ಕಸೂತಿ ಲೆಹೆಂ ಗಾದಲ್ಲಿ ತುಂಬಾ ಸುಂ ದರವಾಗಿ ಕಾಣುತ್ತಿದ್ದರು. ಕಿವಿಯೋಲೆಗಳು, ಮಾಂಗ್ ಟಿಕ್ಕಾ ಮತ್ತು ಭಾರೀ ನೆಕ್ಲೇಸ್ ಧರಿಸಿದ್ದರು. ಈ ಸಮಯದಲ್ಲಿ, ಅನಂತ್ ತನ್ನ ಭಾವಿ ವಧುವಿನ ಜೊತೆ ಸಂತೋಷದಿಂದ ನೃತ್ಯ ಮಾಡುತ್ತಿರುವುದು ಕಂಡುಬಂದಿದೆ. ಮಾಮೇರು ಸಮಯದಲ್ಲಿ, ರಾಧಿಕಾ ಅವರ ತಾಯಿಯ ಚಿಕ್ಕಪ್ಪ ಅವರಿಗೆ ಸಾಕಷ್ಟು ಸಿಹಿತಿಂಡಿಗಳು ಮತ್ತು ಉಡುಗೊರೆಗಳನ್ನು ನೀಡಿದ್ದಾರೆ. ಈ ಸಂಪೂರ್ಣ ಕಾರ್ಯಕ್ರಮದಲ್ಲಿ ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಖೇಶ್ ಅಂಬಾನಿ, ನೀತಾ ಅಂಬಾನಿ ಮತ್ತು ಆಕಾಶ್, ಶ್ಲೋಕಾ, ಇಶಾ ಮತ್ತು ಆನಂದ್ ಪಿರಾಮಲ್ ಉಪಸ್ಥಿತರಿದ್ದರು. ಇಶಾ ಅವರ ಮಾವ ಸ್ವಾತಿ ಪಿರಾಮಲ್ ಮತ್ತು ಆನಂದ್ ಪಿರಾಮಲ್ ಕೂಡ ಉಪಸ್ಥಿತರಿದ್ದರು. ಅಂಬಾನಿ ಸೊಸೆ ಶ್ಲೋಕಾ ಮೆಹ್ತಾ ಅವರ ತಾಯಿ ಮೋನಾ ಮೆಹ್ತಾ ಮತ್ತು ತಂದೆ ರಸೆಲ್ ಮೆಹ್ತಾ ಕೂಡ ಅದ್ಭುತವಾಗಿ ಕಾಣುತ್ತಿದ್ದರು. ನಿನ್ನೆ ನಡೆದ ಮಾಮೇರು ಸಮಾರಂಭಕ್ಕೆ ಆಂಟಿಲಿಯಾ ವಧುವಿನಂತೆ ಅಲಂಕರಿಸಲಾಗಿತ್ತು.

# ಕಾದಾಡಿಯಲ್ಲಿ ಹೊಡೆದಾಡಲು ಆದಿತ್ಯ ಶಶಿಕುಮಾರ್ ರೆಡಿ



ಜೀವನವನ್ನು ತ್ಯಾಗ ಮಾಡುವ ಮೂಲಕ ಸಮಾಜಕ್ಕೆ ಏನನ್ನಾದರೂ ಕೊಡಬೇಕು ಈ ಸಂದೇಶವನ್ನಿಟ್ಟುಕೊಂಡು ಕನ್ನಡ, ತೆಲುಗು ಮತ್ತು ತಮಿಳು ಭಾಷೆಯಲ್ಲಿ 'ಕಾದಾಡಿ' ಸಿನಿಮಾ ನಿರ್ದೇಶನ ಮಾಡಿದ್ದಾರೆ ಸತೀಶ್ ಮಾಲೆಂಪಾಟಿ. ಸುಪ್ರೀಂ ಹೀರೋ ಶಶಿಕುಮಾರ್ ಪುತ್ರ ಆದಿತ್ಯ ಶಶಿಕುಮಾರ್ ವಿಭಿನ್ನ ಶೇಡ್‌ಗಳ ರಗಡ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

ಅರುಣಂ ಫಿಲಿಂಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣ ಮಾಡಿದ್ದಾರೆ. ಪ್ರಚಾರದ ಕೊನೆ ಹಂತದ ಸಲುವಾಗಿ ಮೊನ್ನೆಯಷ್ಟೇ ನಾಯಕ, ನಿರ್ದೇಶಕ ಹಾಗೂ ವಿಶ್ವ ಫಿಲಂಸ್‌ನ ವಿಶ್ವನಾಥ್ ಮಾಧ್ಯಮದ ಎದುರು ಹಾಜರಾಗಿ ಮಾಹಿತಿ ಹಂಚಿಕೊಂಡರು. ಇದಕ್ಕೂ ಮುನ್ನ ಸಿನಿಮಾದ ನಾಲ್ಕು ಹಾಡುಗಳು ಹಾಗೂ ಟ್ರೇಲರ್ ಅನಾವರಣಗೊಂಡಿತು. ಈ ಸಿನೆಮಾದಲ್ಲಿ ನನ್ನದು ವಿಭಿನ್ನ ಶೇಡ್ ಪಾತ್ರ. ಕೊನೆವರೆಗೆ ನಾಯಕ ಒಳ್ಳೆಯವನ ಕೆಟ್ಟವನ ಎಂದು ನಿರೀಕ್ಷಿಸಲು ಸಾಧ್ಯವಾಗುವುದಿಲ್ಲ. ನಿರ್ಮಾಪಕರು ರೀಲ್ಸ್ ಹೆಚ್ಚು ಮಾಡಿಸಿದ್ದಾರೆ. ಆದರೆ ಇದು ಟಿಕೆಟ್ ರೂಪಕ್ಕೆ ಬದಲಾಗೋಲ್ಲ. ಮೂರನೇ ಸಿನಿಮಾದ ಮೇಲೆ ತುಂಬಾ ಭರವಸೆ ಇಟ್ಟುಕೊಂಡಿದ್ದೇನೆ. ನೀವೆಲ್ಲರೂ ಪ್ರೋತ್ಸಾಹಿಸಿ ಎಂದು ಆದಿತ್ಯ ಶಶಿಕುಮಾರ್ ಕೋರಿಕೊಂಡರು.

ಏಕಕಾಲಕ್ಕೆ ಮೂರು ಭಾಷೆಗಳಲ್ಲಿ ಚಿತ್ರವನ್ನು ಸಿದ್ದಪಡಿಸಲಾಗಿದೆ. ಕಿರುಚಿತ್ರ, ತೆಲುಗುದಲ್ಲಿ ಕಮರ್ಷಿಯಲ್ ಸಿನಿಮಾಗೆ ಆಕ್ಷನ್ ಕಟ್ ಹೇಳಿದ್ದೇನೆ. ಕನ್ನಡದಲ್ಲಿ ಹೊಸ ಅನುಭವ. ಮೊದಲು ಇಲ್ಲಿ ಬಿಡುಗಡೆ ಮಾಡಿ, ಆಗಸ್ಟ್‌ಗೆ ತೆಲುಗು, ತಮಿಳಿನಲ್ಲಿ ರಿಲೀಸ್ ಮಾಡಲಾಗುವುದೆಂದು ನಿರ್ದೇಶಕರ ಸತೀಶ್ ಮಾಲೆಂಪಾಟಿ ಹೇಳಿಕೊಂಡರು. ತ್ಯಾಗಮಯವಾಗುತ್ತಿರುವ ಜನರ ಜೀವನವು ದಿನದ ಅಂತ್ಯದಲ್ಲಿ ಪ್ರತಿಯೊಬ್ಬರು ತ್ಯಾಗಮಯಿರಾಗುತ್ತಾರೆ. ನಾವೆಲ್ಲರೂ ಕಾದಾಡುತ್ತಾ ಒಂದು ದಿನ ಸಾಯುತ್ತೇವೆ. ಆದರೆ ನಮ್ಮ ಜೀವನವನ್ನು ತ್ಯಾಗ ಮಾಡುವ ಮೂಲಕ ಸಮಾಜಕ್ಕೆ ಏನನ್ನಾದರೂ ಕೊಡಬೇಕು. ಮಕ್ಕಳಿಗೆ ಏನಾದರೂ ಆಗಬೇಕು. ನಾವು ದಿನದಿಂದ ದಿನಕ್ಕೆ ಹೋರಾಟ ನಡೆಸುತ್ತಿದ್ದೇವೆ. ಇಂತಹ ಅಂಶಗಳನ್ನು ಥ್ರಿಲ್ಲರ್ ಮೂಲಕ ತೋರಿಸುವ ಪ್ರಯತ್ನ ಮಾಡಲಾಗಿದೆ. ಲಾವಣ್ಯಸಾಹುಕಾರ,ಚಾಂದಿನಿತಮಿಳರಸನ್ ನಾಯಕಿಯರು. ಉಳಿದಂತೆ ಪೋಸಾನಿ, ರವಿಕಾಳೆ, ಮಾರಿಮುತ್ತು, ಪ್ರೇಮ್‌ಮನೋಹರ್, ಶ್ರವಣ್‌ರಾಘವೇಂದ್ರ ಮುಂತಾದವರು ನಟಿಸಿದ್ದಾರೆ. ಆರು ಹಾಡುಗಳಿಗೆ ಭೀಮ್ಸ್ ಸಿಸಿರಿಲಿಯೋ ಸಂಗೀತ ಸಂಯೋಜಿಸಿದ್ದಾರೆ. ಛಾಯಾಗ್ರಹಣ ಡಿ.ಯೋಗಿಪ್ರಸಾದ್, ಕಲೆ ಅರ್ಜುನ್‌ಸೂರಿಸೆಟ್ಟಿ, ಸಂಕಲನ ಪ್ರಕಾಶ್‌ತೋಟ, ನೃತ್ಯ ರಾಜ್‌ಪಿಡಿ-ರಾಜ್‌ಕೃಷ್ಣ, ಸಾಹಸ ಬಿ.ಎಲ್.ಸತೀಶ್-ವಿನ್‌ಚೇನ್‌ಆಂಜಿ-ಬಿಂಬಸಾರ-ರಾಮಕೃಷ್ಣ-ರಾಮಸುಂಕರ ಅವರದಾಗಿದೆ. ಗೋವಾ, ಚಿಕ್ಕಮಗಳೂರು, ಹೈದರಬಾದ್, ಚೆನ್ನೈ ಸುಂದರ ತಾಣಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ. ಅಂದಹಾಗೆ ಸಿನಿಮಾವು ಜುಲೈ ಮೊದಲ ವಾರದಂದು ತೆರೆಗೆ ಬರುವ ಸಾಧ್ಯತೆ ಇದೆ. ಸದ್ಯ ನನ್ನ ಹೆಸರು ಈ ಹಿಂದೆ ಅಕ್ಷಿತ್ ಶಶಿಕುಮಾರ್ ಎಂಬುದಾಗಿತ್ತು. ಇದೀಗ, ಆದಿತ್ಯ ಶಶಿಕುಮಾರ್ ಎಂದು ಬದಲಾಯಿಸಿಕೊಂಡಿದ್ದೇನೆ. ಶಾಲಾ ದಾಖಲಾತಿಗಳಲ್ಲಿ ಇದೇ ಹೆಸರಿನಲ್ಲಿ ನಮೂದು ಆಗಿದೆ. ಜ್ಯೋತಿಷ್ಯವನ್ನು ಹೆಚ್ಚು ನಂಬುವುದರಿಂದ ಈ ರೀತಿ ನಿರ್ಣಯ ತೆಗೆದುಕೊಳ್ಳಲಾಗಿದೆ.

## ಸಿನಿ ಸುದ್ದಿ

### ಇದು ಪಕ್ಕಾ ಪೆಕ್ಯೂಲಿಯರ್ ಸಿನೆಮಾ

# ಅಡವಿಕಟ್ಟೆಯಲ್ಲಿ ಕಾಣದ ಮರ್ಮ ಟ್ರೈಲರ್ ಬಿಡುಗಡೆ ಮಾಡಿದ ಡಿ.ಕೆ.ಸುರೇಶ್



ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿರುವ 'ಅಡವಿಕಟ್ಟೆ' ಸಿನೆಮಾದ ಟ್ರೈಲರ್ ಬಿಡುಗಡೆಯಾಗಿದೆ. ಮಾಜಿ ಸಂಸದ ಡಿ.ಕೆ.ಸುರೇಶ್ ಈ ಚಿತ್ರದ ಟ್ರೈಲರ್ ಅನಾವರಣ ಮಾಡಿ ಚಿತ್ರತಂಡಕ್ಕೆ ಶುಭಕೋರಿದ್ದಾರೆ.

ಉಮ ಎಸ್ ನಿರ್ಮಿಸಿರುವ, ಸಂಜೀವ್ ಗಾವಂಡಿ ನಿರ್ದೇಶನದ ಹಾಗೂ ಹಿರಿಯನಟ ಆಭಿಜಿತ್ ಹಾಗೂ ನಾಗರಾಜು ಪ್ರಮುಖಪಾತ್ರದಲ್ಲಿ ನಟಿಸಿದ್ದಾರೆ.

ಟ್ರೇಲರ್ ಬಿಡುಗಡೆ ಮಾಡಿದ ಬಳಿಕ ಮಾತನಾಡಿದ ಡಿ.ಕೆ.ಸುರೇಶ್ ಅವರು, ಕನ್ನಡದಲ್ಲಿ ಸಾಕಷ್ಟು ಉತ್ತಮ ಕಂಟೆಂಟ್ ವುಳ್ಳ ಚಿತ್ರಗಳು ಬರುತ್ತಿದೆ. ಆ ಸಾಲಿಗೆ ಈ ಚಿತ್ರ ಕೂಡ ಸೇರಲಿದೆ ಎಂದು ನನಗೆ ಟ್ರೇಲರ್ ನೋಡಿದಾಗ ಅನಿಸಿತು. ಚಿತ್ರತಂಡಕ್ಕೆ ಒಳ್ಳೆಯದಾಗಲಿ. ಚಿತ್ರ ಯಶಸ್ವಿಯಾಗಲಿ ಎಂದು ಹಾರೈಸಿದರು.



ನನ್ನದು ವಿಶೇಷ ಪಾತ್ರ. ಅಡವಿಕಟ್ಟೆ ನೋಡಿದಾಗ ನಿಮಗೂ ನನ್ನ ಪಾತ್ರ ಇಷ್ಟವಾಗುತ್ತದೆ. ಸಿನೆಮಾ ಚೆನ್ನಾಗಿ ಮೂಡಿಬಂದಿದೆ. ಟ್ರೇಲರ್ ಬಿಡುಗಡೆ ಮಾಡಿಕೊಟ್ಟ ಡಿ.ಕೆ.ಸುರೇಶ್ ಅವರಿಗೆ ಧನ್ಯವಾದ ಎಂದರು ಹಿರಿಯ ನಟ ಅಭಿಜಿತ್.

ನಾನು ಕನಕಪುರದ ಹತ್ತಿರದ ಹಳ್ಳಿ ಯಿಂದ ಬಡ ಕುಟುಂಬದಿಂದ ಬಂದವನು. ಸಿನಿಮಾದಲ್ಲಿ ನಟಿಸುವುದು ನನ್ನ ಆಸೆಯಾಗಿತ್ತು. ಅದು ಈಗ ನನಸ್ಸಾಗಿದೆ. ನಮ್ಮ ಸಿನೆಮಾದ ಟ್ರೈಲರ್ ಅನ್ನು ಡಿ.ಕೆ.ಸುರೇಶ್ ಅವರು ಬಿಡುಗಡೆ ಮಾಡಿ ಕೊಟ್ಟಿದ್ದು ನನಗೆ ಬಹಳ ಸಂತೋಷವಾಗಿದೆ. ಅವರಿಗೆ ಅನಂತ ಧನ್ಯವಾದ ಎಂದರು ಪ್ರಮುಖ ಪಾತ್ರ ಧಾರಿ ನಾಗ ರಾಜು. ಇದೊಂದು ಸಸ್ಪೆನ್ಸ್ ಥ್ರಿಲ್ಲರ್ ಜತೆಗೆ ಹಾರಾರ್ ಜಾನರ್ ಸಿನೆಮಾ. ಕನ್ನಡದಲ್ಲಿ ಸಾಕಷ್ಟು ಈ ಜಾನರ್ ಸಿನೆಮಾಗಳು ಬಂದಿದೆಯಾದರೂ ಇದು ವಿಭಿನ್ನ. ಶೀರ್ಷಿಕೆ ಹೆಸರೆ ಹೇಳುವಂತೆ ಇದೊಂದು ಇದು ಅಡವಿ ಅಂ-ದರೆ ಕಾಡಿನಲ್ಲಿ ನಡೆಯುವ ಕಥೆ. ಗೋಕಾಕ್ ನಗರದ ಸುತ್ತಮುತ್ತ ಹೆಚ್ಚಿನ ಚಿತ್ರೀಕರಣ ನಡೆದಿದೆ. ಸದ್ಯದಲ್ಲೇ ಚಿತ್ರ ಬಿಡುಗಡೆಯಾಗಲಿದೆ ಎಂದು ನಿರ್ದೇಶಕ ಸಂಜೀವ್ ಗಾವಂಡಿ.

ಸಿನೆಮಾ ಉತ್ತಮವಾಗಿ ಮೂಡಿಬರಲು ಸಹಕಾರ ನೀಡಿದ ಚಿತ್ರತಂಡ-ಕ್ಕೆ ನಿರ್ಮಾಪಕಿ ಉಮಾ ಧನ್ಯವಾದ ತಿಳಿಸಿದರು. ನಟಿಯರಾದ ಶಾಂತಿ, ಮಂಜುಳ ಹಾಗೂ ವಿತರಕ ಶ್ರೀಧರ್ ಸಿನೆಮಾದ ಕುರಿತು ಮಾತನಾಡಿದರು.

# ಬಿಡುಗಡೆಗೂ ಮುನ್ನ ಧೂಳೆಬ್ಬಿಸುತ್ತಿರುವ ಗೌರಿ

ಮೊದಲ ಸಿನೆಮಾ ಬಿಡುಗಡೆಗೂ ಮುನ್ನ ಅದೆಷ್ಟೊ ಹೆಣ್ಣುಮಕ್ಕಳ ನಿದ್ದೆಗೆಡಿಸಿರುವ ಸ್ಫುರದ್ರೂಪಿ ನಟ ಸಮರ್ಜಿತ್ ಲಂಕೇಶ್. ಕನ್ನಡ ಮಾತ್ರವಲ್ಲದೆ ಇತರೆ ಭಾಷೆಗಳಲ್ಲಿ ನೆಲೆಯೂರುವ ಎಲ್ಲಾ ಲಕ್ಷಣಗಳು ಈತನಿಗಿದೆ. ಸ್ಯಾಂಡಲ್‌ವುಡ್‌ನ ಸ್ಟೈಲಿಶ್ ನಿರ್ದೇಶಕ ಇಂದ್ರಜಿತ್ ಲಂಕೇಶ್ ನಿರ್ದೇಶನದ 'ಗೌರಿ' ಸಿನೆಮಾ ಬಿಡುಗಡೆಗೂ ಮುನ್ನವೇ ಹಲವಾರು ಕಾರಣಗಳಿಂದ ಸದ್ದುಮಾಡುತ್ತಿದೆ. ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿರುವ ಈ ಚಿತ್ರದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಬಹು ನಿರೀಕ್ಷಿತ ಈ ಚಿತ್ರ ಆಗಸ್ಟ್ 15 ಸ್ವತಂತ್ರ ದಿನಾಚರಣೆ ದಿನ ಹಾಗೂ ವರಮಹಾಲಕ್ಷ್ಮೀ ಹಬ್ಬದ ಸಂದರ್ಭದಲ್ಲಿ ಬಿಡುಗಡೆಯಾಗಲಿದೆ. ನಗರದ ರಾಜಾಜಿನಗರದ ವಿದ್ಯಾವಿಹಾರ (ಎಂ ಇ ಎಸ್ ಮ್ಯಾನೇಜ್ಮೆಂಟ್) ಕಾಲೇಜಿನಲ್ಲಿ ಅದ್ದೂರಿ ಸಮಾರಂಭ ಆಯೋಜಿಸಿದ್ದರು. ಅಧಿಕ ಸಂಖ್ಯೆಯ ವಿದ್ಯಾರ್ಥಿಗಳು ಸಮಾರಂಭಕ್ಕೆ ಸಾಕ್ಷಿಯಾದರು. ಸಮಾರಂಭದ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಮ್ಮ "ಗೌರಿ" ಚಿತ್ರತಂಡ ಕರ್ನಾಟಕದಾದ್ಯಂತ ಸಂಚಾರ ಮಾಡುತ್ತಿದೆ. ಆ



ಆಗಸ್ಟ್ 15 ರಂದು ಬೆಳ್ಳಿತೆರೆಗೆ

ಊರಿನ ಮಾಧ್ಯಮದವರು ಹಾಗೂ ಅಭಿಮಾನಿಗಳು ನೀಡುತ್ತಿರುವ ಪ್ರೋತ್ಸಾಹಕ್ಕೆ ಮನ ತುಂಬಿ ಬಂದಿದೆ. ಹಾಡುಗಳ ಮೂಲಕ ಈಗಾಗಲೇ ಜನರನ್ನು ತಲುಪಿರುವ "ಗೌರಿ" ಚಿತ್ರ ಇದೇ ಆಗಸ್ಟ್ 15 ರಂದು ರಾಜ್ಯಾದ್ಯಂತ ಅದ್ದೂ-ರಿಯಾಗಿ ಬಿಡುಗಡೆಯಾಗುತ್ತಿದೆ. ವರಮಹಾಲಕ್ಷ್ಮೀ, ಸ್ವಾತಂತ್ರ ದಿನಾಚರಣೆ, ರಕ್ಷಾ ಬಂಧನ ಹೀಗೆ ಸಾಲುಸಾಲು ರಜೆ ದಿನಗಳು ಆ ಸಮಯದಲ್ಲಿದೆ. ಹಾಗಾಗಿ ಆಗಸ್ಟ್ 15 ದಿನಾಂಕವನ್ನು ಆಯ್ಕೆ ಮಾಡಿಕೊಂಡಿದ್ದೇವೆ. ಒಬ್ಬ ಪ್ರೇಕ್ಷಕನಾಗಿ ಸಿನಿಮಾ ನೋಡಿದಾಗ ನನಗೆ ಬಹಳ ಇಷ್ಟವಾಯಿತು.

ಪ್ರೇಕ್ಷಕರಿಗೂ ನಮ್ಮ ಚಿತ್ರ ಮೆಚ್ಚುಗೆಯಾಗಲಿದೆ ಎಂದರು ಇಂದ್ರಜಿತ್ ಲಂಕೇಶ್. ಆಗಸ್ಟ್ 15, ನನ್ನ ಕನಸು ನನ್ನಸಾಗುವ ದಿನ. ಈ ದಿನಕ್ಕಾಗಿ ಕಾಯುತ್ತಿದೆ. ಅವಕಾಶ ನೀಡಿದ ಇಂದ್ರಜಿತ್ ಲಂಕೇಶ್ ಅವರಿಗೆ ಧನ್ಯವಾದ ಎಂದರು ನಾಯಕಿ ಸಾನ್ಯ ಅಯ್ಯರ್. ಜೆಸ್ಸಿ ಗಿಫ್ಟ್, ಚಂದನ್ ಶೆಟ್ಟಿ, ಶಿವು ಭೇರ್ಗಿ ಹಾಗೂ ಅನಿರುದ್ಧ ಶಾಸ್ತ್ರಿ ಸಂಗೀತ ಸಂಯೋಜಿಸಿದರೆ, ಮ್ಯಾಥ್ಸ್ ಮನ ಹಿನ್ನೆಲೆ ಸಂಗೀತ ಸಂಯೋಜಿಸಿದ್ದಾರೆ.

ವಿ.ನಾಗೇಂದ್ರ ಪ್ರಸಾದ್, ಕವಿರಾಜ್, ಕೆ.ಕಲ್ಯಾಣ್, ವರದರಾಜ್ ಚಿಕ್ಕಬಳ್ಳಾಪುರ, ಗುಬ್ಬಿ ಹಾಡುಗಳನ್ನು ರಚಿಸಿದ್ದಾರೆ. ಕೈಲಾಶ್ ಖೇರ್, ಚಂದನ್ ಶೆಟ್ಟಿ, ಅನಿರುದ್ಧ ಶಾಸ್ತ್ರಿ, ಜಾವೇದ್ ಅಲಿ, ಅನನ್ಯ ಭಟ್, ನಿಹಾಲ್ ತೌರೋ, ಅದಿತಿ ಸಾಗರ್, ಬಾಲಸುಬ್ರಹ್ಮಣ್ಯಂ, ಪ್ರಜ್ವಾ ಮರಾಠ, ಸಮರ್ಜಿತ್ ಮುಂತಾದವರು ಹಾಡುಗಳನ್ನು ಹಾಡಿದ್ದಾರೆ. ನೀನಾಸಂ ಅಶ್ವಥ್, ಮಾನಸೀ ಸುಧೀರ್, ಸಂಪತ್ ಮೈತ್ರೇಯಾ ಸೇರಿದಂತೆ ಬಹುದೊಡ್ಡ ತಾರಾಗಣವಿದೆ. ಎ.ಜೆ.ಶೆಟ್ಟಿ ಹಾಗೂ ಕೃಷ್ಣಕುಮಾರ್ ಛಾಯಾಗ್ರಹಣ ಮಾಡಿದ್ದಾರೆ. ಮಾಸ್ತಿ ಮಂಜು, ರಾಜಶೇಖರ್ ಹಾಗೂ ಮಧು ಸಂಭಾಷಣೆ, ರವಿವರ್ಮಾ,ಡಿಫರೆಂಟ್ ಡ್ಯಾನಿ ಸಾಹಸ ನಿರ್ದೇಶನವಿದೆ.ಬ್ಲರ್ಬ್..

ಅಪ್ಪ ಹೇಳಿದ ಹಾಗೆ ಹೋದ ಕಡೆಯಲ್ಲಾ ನಮ್ಮ ಸಿನೆಮಾಕ್ಕೆ ಉತ್ತಮ ಪ್ರತಿಕ್ರಿಯೆ ಸಿಗುತ್ತಿದೆ. ಚಿತ್ರತಂಡದ ಸಹಕಾರದಿಂದ ಗೌರಿ ಚೆನ್ನಾಗಿ ಬಂದಿದೆ. ನನ್ನ ಹಲವು ವರ್ಷಗಳ ಶ್ರಮಕ್ಕೆ ಉತ್ತರ ಸಿಗುವ ದಿನ ಸನಿಹವಿದೆ.ಪ್ರೇಕ್ಷಕರಿಗೆ ಗೌರಿ ಸಿನೆಮಾ ಇಷ್ಟವಾಗುತ್ತದೆ. ನಾಯಕ ಸಮರ್ಜಿತ್ ಲಂಕೇಶ್.

# ಕಣಂಜಾರು ಸಿನೆಮಾದ ಟೀಸರ್ ಬಿಡುಗಡೆ



ಈ ಹಿಂದೆ ಮಹಾನುಭಾವರು ಸಿನೆಮಾ ನಿರ್ಮಾಣಮಾಡಿ ನಾಯಕನಾಗಿ ಅಭಿನಯಿಸಿದ್ದ ಆರ್.ಬಾಲಚಂದ್ರ ಇದೀಗ 'ಕ-ಣಂಜಾರು' ನಿರ್ದೇಶನಕ್ಕೆ ಇಳಿದಿದ್ದಾರೆ.ಇದೀಗ ಚಿತ್ರದ ಟೀಸರ್ ಬಿಡುಗಡೆಯಾಗಿದೆ. ಈ ಹಿಂದೆ ಚಿತ್ರದ ಮೋಷನ್ ಪೋಸ್ಟರ್ ಮತ್ತು ಶೀರ್ಷಿಕೆ ಬಿಡುಗಡೆ ಮಾಡಿದ್ದ ತಂಡಕ್ಕೆ ಸಾಕಷ್ಟು ಮೆಚ್ಚುಗೆ ವ್ಯಕ್ತವಾಗಿತ್ತು. ಈಗ ಟೀಸರ್ ಬಿಡುಗಡೆ ಮಾಡಿರುವ ಚಿತ್ರತಂಡಕ್ಕೆ ಎಲ್ಲೆಡೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಆರ್.ಪಿ ಫಿಲಂಸ್ ಯೂಟ್ಯೂಬ್ ಚಾನಲ್ ನಲ್ಲಿ ಟೀಸರ್ ಬಿಡುಗಡೆ ಆಗಿದೆ. ಟೀಸರ್ ನೋಡಿ ಸಾಕಷ್ಟು ಪ್ರೇಕ್ಷಕರು, ಚಂದನವನದ ಕಲಾವಿದರು ಹಾಗೂ ತಂತ್ರಜ್ಞರು ಚಿತ್ರತಂಡದ ಬೆನ್ನು ತಟ್ಟಿದ್ದಾರೆ. ಥ್ರಿಲ್ಲರ್ ವಿಷಯವನ್ನು ಮುಂದಿಟ್ಟುಕೊಂಡು ಆರ್.ಬಾಲಚಂದ್ರ ನಿರ್ದೇಶನ ಮಾಡುವ ಜೊತೆಗೆ ನಾಯಕನಾಗಿ ಕಾಣಿಸಿಕೊಂಡಿದ್ದಾರೆ. ಚಿತ್ರವನ್ನು ಕಾರ್ಕಳ, ಉಡುಪಿ, ಹೊನ್ನಾವರ ಸೇರಿದಂತೆ ಮತ್ತಿತರ ಕಡೆ 55 ರಿಂದ 60 ದಿನಗಳ ಕಾಲ ಚಿತ್ರೀಕಣ ಮಾಡಲಾಗಿದೆ. ಕಾರ್ಕಳ ಬಳಿಯ ಊರಿನ ಹೆಸರು ಕಣಂಜಾರು. ಥ್ರಿಲ್ಲರ್ ವಿಷಯ ಆಗಿರುವುದರಿಂದ ಆ ಹೆಸರು ಇಡಲಾಗಿದೆ. ಅದು ಯಾಕೆ ಎನ್ನುವುದನ್ನು ಚಿತ್ರದಲ್ಲಿ ನೋಡಬೇಕು ಎನ್ನುತ್ತಾರೆ ನಿರ್ಮಾಪಕರೂ ಆಗಿರುವ ಆರ್.ಬಾಲಚಂದ್ರ. ಈ ಹಿಂದೆ ಮಹಾನುಭಾವರು ಚಿತ್ರದಲ್ಲಿ ನಾಯಕ ಜೊತೆಗೆ ನಿರ್ಮಾಣ ಮಾಡಿದ್ದೆ, ಇದೊಂದು ಆಸಕ್ತಿ ಮತ್ತು ಕುತೂಹಲ ಕಾರಿ ಸಂಗತಿಯ ಕಥೆಯನ್ನು ಹೊಂದಿದ್ದರಿಂದ ನಾನೇ ನಿರ್ದೇಶನ ಮಾಡಲು ಮುಂದಾದೆ. ಚಿತ್ರದ ಉಳಿದ ಮಾಹಿತಿಯನ್ನು ಹಂತ ಹಂತವಾಗಿ ಬಿಡುಗಡೆ ಹಂಚಿಕೊಳ್ಳುವುದಾಗಿ ಹೇಳಿಕೊಂಡಿದ್ದಾರೆ ಆರ್. ಬಾಲಚಂದ್ರ. ಬಾಲಚಂದ್ರ, ಅಪೂರ್ವ,ಶರ್ಮಿತಾ ಗೌಡ,ಹಿರಿಯ ನಟ ರಾಮಕೃಷ್ಣ, ಪಿ.ಎಸ್ ಶ್ರೀಧರ್ ಹಾಗು ಮೇಘ ಸೇರಿದಂತೆ ಹೊಸ ಕಲಾವಿದರು ಚಿತ್ರದಲ್ಲಿ ನಟಿಸಿದ್ದಾರೆ. ಹರ್ಷವರ್ಧನ್ ರಾಜ್ ಸಂಗೀತ, ಶಶಾಂಕ್ ಶೇಷಗಿರಿ ಹಿನ್ನೆಲೆ ಸಂಗೀತ, ವೆಂಕಿ ಯುಡಿವಿ ಸಂಕಲನ, ಮಂಜುನಾಥ್ ಹೆಗ್ಡೆ ಛಾಯಾಗ್ರಹಣವಿದೆ.

# ಚಿತ್ರೀಕರಣ ಮುಗಿಸಿದ ಒನ್ ಅಂಡ್ ಹಾಫ್



ರಂಗ್‌ಬಿರಂಗಿ, ಡೆವಿಡ್, ದಿ ವೆಕೆಂಟ್ ಹೌಸ್ ಸಿನಿಮಾಗಳಲ್ಲಿ ನಟಿಸಿ ಭರವಸೆ ಮೂಡಿಸಿದ್ದ ನಟ ಶ್ರೇಯಸ್ ಚಿಂಗಾ, ಇದೀಗ 'ಒನ್ ಅಂಡ್ ಹಾಫ್' ಸಿನಿಮಾ ಮೂಲಕ ನಿರ್ದೇಶನಕ್ಕೆ ಮುಂದಾಗಿದ್ದಾರೆ.

ಒನ್ ಅಂಡ್ ಹಾಫ್' ಸಿನಿಮಾ ಮೂಲಕ ಆರ್.ಚರಣ್ ನಿರ್ಮಾಪಕರಾಗಿ ಮೊದಲ ಹೆಜ್ಜೆ ಇಡುತ್ತಿದ್ದಾರೆ. ಇವರ ಜನ್ಮದಿನದ ಪ್ರಯುಕ್ತ ಹಾಡಿನ ಗ್ಲಿಂಪ್ಸ್ ಬಿಡುಗಡೆ ಮಾಡಲಾಯಿತು. ನಗರದ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಸಿನೆಮಾದ ಬಗ್ಗೆ ಮಾಹಿತಿ ಹಂಚಿಕೊಂಡಿದೆ.

ಇದು ನನಗೆ ಸ್ಪೆಷಲ್ ಸಿನಿಮಾ. ಈ ಸಿನಿಮಾ ಬಂದ ಮೇಲೆ ನನ್ನ ಲೈಫ್ ಗೆ ಹೊಸ ವ್ಯಕ್ತಿ ಬಂದರು. ಸಿನಿಮಾ ತುಂಬಾ ಚೆನ್ನಾಗಿ ಮೂಡಿಬಂದಿದೆ. ಮಣಿಕಾಂತ್ ಕದ್ರಿಯವ ಸಂಗೀತ ಇಂಪಾಗಿದೆ. ಲಿಖಿತಾ, ಸಿರಿ ನನ್ನ ಸಹ ನಟಿಯರಾಗಿ ಅಭಿನಯಿಸಿದ್ದಾರೆ. ಶ್ರೇಯಸ್ ಜೊತೆಗೆ ಕೆಲಸ ಮಾಡಿದ ಅನುಭವ ಚನ್ನಾಗಿತ್ತು ಎಂದರು ನಟಿ ಮಾನ್ವಿತಾ

ನಿರ್ದೇಶಕ, ನಾಯಕ ನಟ ಶ್ರೇಯಸ್ ಚಿಂಗಾ ಮಾತನಾಡಿ, ಸಿನಿಮಾವನ್ನು ತೆರೆಗೆ ತರಲು ಬೆಂಬಲಿಸಿದ ಇಡೀ ಚಿತ್ರತಂಡಕ್ಕೆ ಧನ್ಯವಾದ. ಈ ಸಮಯದಲ್ಲಿ ಜನ ಥಿಯೇಟರ್ ಗೆ ಬರುತ್ತಿಲ್ಲ. ನಿಮ್ಮ ಬೆಂಬಲ ನಮಗೆ ಇರಬೇಕು. ಇದು ತುಂಬಾ ವಿಭಿನ್ನ ಸಿನಿಮಾ. ಬೇರೆ ಭಾಷೆಯಲ್ಲಿ ಮಾಡುವ ಸಾಧ್ಯತೆ ನೂರಷ್ಟಿದೆ ಎಂದು ಅಭಿಪ್ರಾಯಪಟ್ಟರು.

ನಿರ್ಮಾಪಕ ಆರ್.ಚರಣ್ ಸುಬ್ಬಯ್ಯ ಮಾತನಾಡಿ, ನಾನು ಗಾಂಧಿನಗರದ ಹುಡುಗ. ಶ್ರೇಯಸ್ ಮಾಡಿದ ಡೆವಿಡ್ ಸಿನಿಮಾ ನೋಡಿ ಇಷ್ಟವಾಯ್ತು. ನನಗೆ ಊಹೆ ಕೂಡ ಮಾಡಲು ಆಗಲಿಲ್ಲ. ಈ ರೀತಿ ಸಿನಿಮಾ ಮಾಡಿದ್ದಾನೆ ಎಂದು.

ಯಾವುದಾದರೂ ಕಾನ್ಸೆಪ್ಟ್ ಇದ್ದ-ರೆ ಹೇಳು ಎಂದು ಹೇಳಿದೆ. ಅವನು ಹೇಳಿದ ಕೇಳಿದ ಕಥೆ ನನಗೆ ಇಷ್ಟವಾಗಿ ಅಡ್ವಾನ್ಸ್ ಕೊಟ್ಟಿದ್ದೆ.

ಒಂದೊಳ್ಳೆ ಬ್ಯೂಟಿಫುಲ್ ಸಬ್ಜೆಕ್ಟ್. ಈ ಸಿನಿಮಾವನ್ನು ಥಿಯೇಟರ್ ಗೆ ಬಂದು ನೋಡಬೇಕು ಎಂದರು.

ಶ್ರೇಯಸ್ ಚಿಂಗಾ, ಮಾನ್ವಿತಾ ಕಾಮತ್ ಜೊತೆಗೆ ಸಾಧು ಕೋಕಿಲಾ, ಅನಿನಾಶ್, ಸುಚೇಂದ್ರ ಪ್ರಸಾದ್, 'ಸ್ಪರ್ಶ' ರೇಖಾ, ಮುಂತಾದವರ ತಾರಾಗಣವಿದೆ. ದೇವೇಂದ್ರ ಛಾಯಾಗ್ರಹಣ, ಮಣಿಕಾಂತ್ ಕದ್ರಿ ಸಂಗೀತವಿದೆ. ಸುಲಕ್ಷ್ಮೀ ಫಿಲ್ಮ್ ಬ್ಯಾನರ್‌ನಡಿ ಆರ್.ಚರಣ್, ಇಂಪನಾ ಪ್ರಸಾದ್, ಅರ್ಪಿತ್ ನಾರಾಯಣ್, ಸಂತೋಷ್ ನಾಗೇನಹಳ್ಳಿ ಸೇರಿ ನಿರ್ಮಾಣ ಮಾಡುತ್ತಿದ್ದಾರೆ.

## ಒಂದನೇ ಪುಟದಿಂದ

## ನಾಯಕತ್ವದ ಗುಣ ಪ್ರತಿಯೊಬ್ಬ ಮಹಿಳೆಯರಲ್ಲೂ ಇರಬೇಕು: ಎಸ್ಪಿ ಉಮಾ ಪ್ರಶಾಂತ್

ನಿಗಧಿತವಾದ ಪಠ್ಯಕ್ರಮಗಳನ್ನಷ್ಟೇ ಓದದೆ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತಿಳಿಸಿದುಕೊಂಡರೆ ಮುಂದೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆಯ್ಕೆ ಮಾಡಿಕೊಳ್ಳಲು ಸಹಾಯವಾಗಲಿದೆ. ಈ ನಿಟ್ಟಿನಲ್ಲಿ ಕಾಲೇಜುಗಳಲ್ಲೂ ಹೇಳಿಕೊಡಬೇಕಾದ ಅವಶ್ಯಕತೆ ಇದೆ ಎಂದು ಅಭಿಪ್ರಾಯಪಟ್ಟರು.ಪದವಿ ಮುಗಿಸಿರುವ ನಿಮಗೆ, ನಿಮ್ಮ ಯೋಚನೆ ಮೇಲೆ ನಿಮ್ಮ ಮುಂದಿನ ಶಿಕ್ಷಣ ಮತ್ತು ಜೀವನ ನಿರ್ಧಾರವಾಗುತ್ತದೆ. ನಕಾರಾತ್ಮಕವಾಗಿ ಯೋಚಿಸದೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆಯ್ಕೆ ಮಾಡುವತ್ತ ಗಮನ ಹರಿಸಬೇಕು ಎಂದರು.ಪ್ರಸ್ತುತ ಜಗತ್ತಿನಲ್ಲಿ ಮಹಿಳೆಯರಿಗೆ ಶಿಕ್ಷಣದ ಜೊತೆಗೆ ಆರ್ಥಿಕ ಸ್ವಾತಂತ್ರ ಬಹಳ ಮುಖ್ಯವಾಗಿದ್ದು, ಆರ್ಥಿಕವಾಗಿ ಸ್ವಾತಂತ್ರರಾದ–ರೆ ಜೀವನದಲ್ಲಿ ನಿರ್ಧಾರವನ್ನು ತೆಗೆದುಕೊಳ್ಳಲು ಸಾಧ್ಯವಾಗುತ್ತದೆ. ಆದ್ದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದು, ಉದ್ಯೋಗಸ್ಥರಾದರೆ ಜೀವನದಲ್ಲಿ ಚನ್ನಾಗಿ ಇರಬಹುದು ಮತ್ತು ನಿಮ್ಮ ಮನೆಯಲ್ಲೂ ನೀವು ಹೇಳುವ ಮಾತಿಗೆ ಪ್ರಾಮುಖ್ಯತೆ ಸಿಗಲಿದೆ ಎಂದರು.ನಾಯಕತ್ವದ ಗುಣ ಪ್ರತಿಯೊಬ್ಬ ಮಹಿಳೆಯರಲ್ಲೂ ಇರಬೇಕು. ನಾಯಕತ್ವದ ಗುಣಗಳನ್ನು ಬೆಳೆಸಿಕೊಂಡರೆ ಜೀವನದಲ್ಲಿ ಸರಿಯಾದ ನಿರ್ಧಾರವನ್ನು ತೆಗೆದುಕೊಳ್ಳಬಹುದು. ವಿದ್ಯಾರ್ಥಿನಿಯರು ಮೊಬೈಲ್'ನಲ್ಲೇ ತಮ್ಮ ಮೂಲ್ಯ ಸಮಯವನ್ನು ಕಳೆಯಬಾರದು. ಹುಡುಗಿಯರು ಸಾಮಾಜಿಕ ಜಾಲತಾಣಗಳಲ್ಲಿ ಹಾಕುವ ಫೋಟೋಗಳು ದುರ್ಬಳಕೆ ಆಗುತ್ತಿದ್ದು, ಇದರಿಂದ ನಿಮಗೆ ತೊಂದರೆ ಆಗಲಿದೆ. ಆದ್ದರಿಂದ ಮೊಬೈಲ್'ಗಳನ್ನು ಜವಾಬ್ದಾರಿನದಿಂದ ಬಳಕೆ ಮಾಡಬೇಕು ಎಂದರು.ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿನಿಯರು ಶಿಕ್ಷಣ ಹೆಚ್ಚು ಎನ್ನುವ ಬದಲು ಪ್ರೀತಿಯಲ್ಲಿ ಬೀಳುತ್ತಿದ್ದಾರೆ. ಓದುವಾಗ ಪ್ರೀತಿಯ ಕಡೆ ಗಮನಕೊಡದೆ ಚೆನ್ನಾಗಿ ಓದಿ ಸಾಧನೆ ಮಾಡಬೇಕು. ನಿಮಗೆ ಕಾನೂನಿನಲ್ಲಿ ಇರುವ ಹಕ್ಕುಗಳ ಬಗ್ಗೆ, ಸರ್ಕಾರದಿಂದ ಸಿಗುವ ಸೌಲಭ್ಯಗಳ ಬಗ್ಗೆ ತಿಳಿದುಕೊಳ್ಳಬೇಕು ಎಂದರು

## ಬಯಲು ಸೀಮೆ, ಮಳೆಯಾಶ್ರಿತ ಜಗಳೂರು ತಾಲ್ಲೂಕಿನ 47 ಕೆರೆಗಳಿಗೆ ನೀರು ತುಂಬಿಸುವ ಯೋಜನೆ, ಮುಂಗಾರಿನಲ್ಲಿ 30 ಕೆರೆಗಳಿಗೆ ನೀರು

ತಾಲ್ಲೂಕಿನ ತುಪ್ಪದಳ್ಳಿ ಕೆರೆಗೆ ನೀರು ತುಂಬಿಸುವ ಯೋಜನೆ ವೀಕ್ಷಣೆ ಮಾಡಿ ಮಾತನಾಡಿದರು. ಜಗಳೂರು ತಾಲ್ಲೂಕಿನ ಕೆರೆ ತುಂಬಿಸುವ ಏತ ನೀರಾವರಿ ಯೋಜನೆಯನ್ನು ರೂ. 660.34 ಕೋಟಿಯಲ್ಲಿ ಕೈಗೊಂಡು 2019 ರ ಡಿಸೆಂಬರ್ 9 ರಿಂದ ಕಾಮಗಾರಿ ಆರಂಭಿಸಲಾಗಿದೆ. ಯೋಜನೆಯಡಿ 1.379 ಟಿಎಂಸಿ ನೀರು ಮಳೆಗಾಲದಲ್ಲಿ ಬಳಕೆ ಮಾಡಿಕೊಂಡು ಕೆರೆಗಳನ್ನು ಭರ್ತಿ ಮಾಡಲಾಗುತ್ತದೆ.

ಈ ಯೋಜನೆಯಿಂದ 65 ಗ್ರಾಮಗಳಿಗೆ ಅನುಕೂಲವಾಗಲಿದ್ದು 1 ಲಕ್ಷ ರೈತರಿಗಿಂತ ಹೆಚ್ಚು ಜನರಿಗೆ ಉಪಯೋಗವಾಗುವ ಜೊತೆಗೆ ತಾಲ್ಲೂಕಿನ ಅಂತರ್ಜಲ ಮಟ್ಟ ಹೆಚ್ಚಾಗಿ ನೀರಿನ ಸಮಸ್ಯೆ ನಿವಾರಣೆಯಾಗಲಿದೆ.

ಯೋಜನೆಯಡಿ 220.68 ಕಿ.ಮೀ ಮುಖ್ಯ ಪೈಪ್ ಲೈನ್ ಉದ್ದ ಇರಲಿದೆ. ಎಂ.ಎಸ್ ಪೈಪ್ 142.62 ಕಿ.ಮೀ ಇದ್ದು 115 ಕಿ.ಮೀ ಅಳವಡಿಸಲಾಗಿದೆ. ಜಾಕ್ ವೆಲ್ ಮತ್ತು ಪಂಪ್ ಹೌಸ್ ಕಾಮಗಾರಿ ಮುಗಿದಿರುವುದರಿಂದ ಈಗಾಗಲೇ ನೀರೆತ್ತುವ ಪ್ರಾಯೋಗಿಕ ಕಾರ್ಯ ಆರಂಭಿಸಲಾಗಿದ್ದು ಪ್ರಸಕ್ತ ಮುಂಗಾರಿನಲ್ಲಿ 30 ಕೆರೆಗಳಿಗೆ ನೀರು ಪಂಪ್ ಮಾಡಿ ಭರ್ತಿ ಮಾಡಲಾಗುತ್ತದೆ ಎಂದರು.

ವೀಕ್ಷಣೆಯಲ್ಲಿ ನೀರಾವರಿ ನಿಗಮದ ಕಾರ್ಯಪಾಲಕ ಇಂಜಿನಿಯರ್ ಮಂಜುನಾಥ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ರಿಷಿ ಸುನಕ್‌ಗೆ ಮುಖಭಂಗ, ಸ್ಟಾರ್ಮರ್ ನೂತನ ಪ್ರಧಾನಿ

ಆರ್ಥಿಕ ಮತ್ತು ರಾಜಕೀಯ ಕ್ರಾಂತಿಯ ನಂತರ ಆಡಳಿತ ನಡೆಸುತ್ತಿರುವ ಕನ್ಸರ್ವೇಟಿವ್ ಪಕ್ಷವನ್ನು ಮತದಾರ ಮನೆಗೆ ಕಳುಹಿಸಿದ್ದಾರೆ. ಈ ಮೂಲಕ ಬ್ರಿಟನ್‌ನ ಲೇಬರ್ ಪಕ್ಷ ಸಂಸತ್ತಿನ ಚುನಾವಣೆಯಲ್ಲಿ ಭಾರಿ ಗೆಲುವಿನತ್ತ ಸಾಗಿದೆ. ಲೇಬರ್ ಪಕ್ಷದ ನಾಯಕ ಕೀರ್ ಸ್ಟಾರ್ಮರ್ ಮುಂದಿನ ಪ್ರಧಾನಿ ಆಗುವುದು ಬಹುತೇಕ ಖಚಿತವಾಗಿದೆ.ಬೆಳಗ್ಗೆ ಸೂರ್ಯ ಉದಯಿಸುತ್ತಿದ್ದಂತೆ, ಅಧಿಕೃತ ಫಲಿತಾಂಶಗಳು ಪ್ರಕಟವಾಗಿದ್ದು ಲೇಬರ್ ಪಕ್ಷ 650 ಸ್ಥಾನಗಳಲ್ಲಿ 326ಕ್ಕೂ ಅಧಿಕ ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಮತ ಎಣಿಕೆ ಮುಂದುವರಿದಿದ್ದು ಭಾರಿ ಬಹುಮತದೊಂದಿಗೆ ಅಧಿಕಾರ ಹಿಡಿಯುವುದು ಖಚಿತವಾಗಿದೆ.

**ಸಂಭಾವ್ಯ ಪ್ರಧಾನಿಗೆ :ರಿಷಿ ಸುನಕ್ ಅಭಿನಂದನೆ**

ಲೇಬರ್ ಪಕ್ಷಕ್ಕೆ ಬಾರಿ ಬಹುಮತ ಲಭ್ಯವಾಗುತ್ತಿದ್ದಂತೆ ಪ್ರಧಾನಿ ರಿಷಿ ಸುನಕ್ ಅವರು ಈಗಾಗಲೇ ಸೋಲು ಒಪ್ಪಿಕೊಂಡಿದ್ದಾರೆ ದೇಶದ ಮುಂದಿನ ಪ್ರಧಾನಿಯಾಗಲಿರುವ ಲೇಬರ್ ಪಕ್ಷದ ನಾಯಕ ಕೀರ್ ಸ್ಟಾರ್ಮರ್‌ಗೆ ಅಭಿನಂದನೆ ಸಲ್ಲಿಸಿದ್ದಾರೆ.ಆರ್ಥಿಕ ಪರಿಸ್ಥಿತಿ ಅರಾಜ–ಕತೆ, ಸಂಸ್ಥೆಗಳಲ್ಲಿ ಹೆಚ್ಚುತ್ತಿರುವ ಅಪನಂಬಿಕೆ ಮತ್ತು ಹದಗೆಡುತ್ತಿರುವ ಸಾಮಾಜಿಕ ರಚನೆಯ ಹಿನ್ನೆಲೆಯಲ್ಲಿ ಬ್ರಿಟನ್ ಮತದಾರರು ಕನ್ಸರ್ವೇಟಿವ್ ಪಕ್ಷಕ್ಕೆ ಮನೆ ಕಡೆ ಹಾದಿ ತೋರಿಸಿ ಅಧಿಕಾರ ರಾಜಕಾರಣದಿಂದ ಬಿಡುವು ನೀಡಿದ್ದಾರೆ.ಲೇಬರ್ ನಾಯಕ ಸರ್ ಕೀರ್ ಸ್ಟಾರ್ಮರ್ ಮಾತನಾಡಿ ದೇಶದ ಜನರು ಈ ಬಾರಿ ಬದಲಾವಣೆ ಬಯಸಿದ್ದಾರೆ.ಅಧಿಕೃತ ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದು ಮತದಾರರ ನಂಬಿಕೆ ಉಳಿಸಿಕೊಳ್ಳುವ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.ದೇಶಾದ್ಯಂತ ಎಣಿಕೆ ಕೇಂದ್ರಗಳಲ್ಲಿ ಸಾವಿರಾರು ಚುನಾವಣಾ ಸಿಬ್ಬಂದಿ ಲಕ್ಷಾಂತರ ಮತಪತ್ರಗಳು ಕನ್ಸರ್ವೇಟಿವ್ ಪಕ್ಷಕ್ಕೆ ಐತಿಹಾಸಿಕ ಸೋಲಿನ ಆಘಾತ ನೀಡಿವೆ. ದೇಶದಲ್ಲಿ "ಕಳೆದ 14 ವರ್ಷಗಳಲ್ಲಿ ಯಾವುದೂ ಸರಿಯಾಗಿ ನಡೆದಿಲ್ಲ". ಈ ಬಾರಿ ಬದಲಾವಣೆ ಬಯಸಿದ್ದರು ಅದೇ ಆಗಿದೆ ಎಂದು ಲಂಡನ್ ಮತದಾರ ಜೇಮ್ಸ್ ಎಸ್ಕಿನ್ ಹೇಳಿದ್ದಾರೆ.ಫ್ರಾನ್ಸ್ ಮತ್ತು ಇಟಲಿ ಸೇರಿದಂತೆ ಯುರೋಪ್‌ನಲ್ಲಿ ಇತ್ತೀಚಿನ ಬಲಪಂಥೀಯ ಚುನಾವಣಾ ಪಲ್ಲಟ ಹೆಚ್ಚಾಗುತ್ತಿವೆ. ಇಲ್ಲಿಯವರೆಗಿನ ಫಲಿತಾಂಶ ದೇಶದಲ್ಲಿ ಹೊಸ ಬದಲಾವಣೆಗೆ ನಾಂದಿ ಹಾಡಿದೆ ಎಂದು ಮತ್ತೊಬ್ಬ ಮತದಾರ ಹೇಳಿದ್ದಾರೆ.650 ಸ್ಥಾನಗಳ ಹೌಸ್ ಆಫ್ ಕಾಮನ್ಸ್ ಮತ್ತು ಕನ್ಸರ್ವೇಟಿವ್ಸ್ ಸುಮಾರು 410 ಸ್ಥಾನಗಳನ್ನು ಗೆಲ್ಲುವ ಹಾದಿಯಲ್ಲಿದೆ, ಕನ್ಸರ್ವೇಟಿವ್ ಪಕ್ಷ 144 ಸ್ಥಾನಗಳಿಗೆ ತೃಪ್ತಿಪಟ್ಟುಕೊಳ್ಳುವ ಸಾಧ್ಯತೆ ಇದೆ ಎಂದು ಅಂದಾಜು ಮಾಡಲಾಗಿದೆ.ಸಂಜೆಯ ವೇಳೆಗೆ ಯಾವ ಪಕ್ಷಕ್ಕೆ ಎಷ್ಟು ಸ್ಥಾನ ಲಭಿಸಲಿದೆ ಎಂಬ ಬಗ್ಗೆ ನಿಖರ ಮಾಹಿತಿ ಲಭ್ಯವಾಗಲಿದೆ.ಮತಗಟ್ಟೆ ಸಮೀಕ್ಷೆಗಳಲ್ಲಿ ಕೀರ್ ಸ್ಟಾರ್ಮರ್ ಬ್ರಿಟನ್ ಮುಂದಿನ ಪ್ರಧಾನಿಯಾಗಲಿದ್ದಾರೆ ಎಂದು ಭವಿಷ್ಯ ನುಡಿದಿದ್ದವು. ಲೇಬರ್ ಪಾರ್ಟಿ 410 ಕ್ಷೇತ್ರಗಳಲ್ಲಿ ಜಯಭೇರಿಸಿದ್ದರೆ, ಕನ್ಸರ್ವೇಟಿವ್ 134 ಸ್ಥಾನಗಳು ಲಭ್ಯವಾಗಲಿದೆ ಎಂದು ಬಿಂಬಿಸಿದ್ದವು.

**ಸೋಲಿನ ಹೊಣೆ ಹೊತ್ತ ಸುನಕ್:**

ಬ್ರಿಟನ್ ಸಂಸತ್ ಚುನಾವಣೆಯಲ್ಲಿ ಲೇಬರ್ ಪಕ್ಷ ಬಾರಿ ಬಹುಮತ ಪಡೆದು ಅಧಿಕಾರ ಹಿಡಿಯುವುದು ಖಚಿತವಾಗುತ್ತಿದ್ದಂತೆ ಕನ್ಸರ್ವೇಟಿವ್ ಪಕ್ಷದ ನಾಯಕ ಹಾಲಿ ಪ್ರಧಾನಿ ರಿಷಿ ಸುನಕ್ ಪಕ್ಷದ ಕಾರ್ಯಕರ್ತರ ಕ್ಷಮೆ ಕೋರಿದ್ದಾರೆ. ಸೋಲಿನ ಜವಾಬ್ದಾರಿ ಹೊರುವುದಾಗಿ ಪ್ರಕಟಿಸಿದ್ದಾರೆ. ರಿಚ್ಮಂಡ್ ಮತ್ತು ಉತ್ತರ ಅಲರ್ಟನ್‌ನಲ್ಲಿ ತಮ್ಮ ಬೆಂಬಲಿಗರನ್ನು ಉದ್ದೇಶಿಸಿ ಮಾತನಾಡಿದ ಅವರು ದೇಶದ ಸ್ಥಿರತೆ ಮತ್ತು ಭವಿಷ್ಯದಲ್ಲಿ ನಾವೆಲ್ಲರೂ ವಿಶ್ವಾಸ ಹೊಂದಿದ್ದೇವೆ". ಚುನಾವಣೆಯಲ್ಲಿ ಮತ್ತೊಮ್ಮೆ ಅಧಿಕಾರ ಹಿಡಿಯಲು ಸಾಧ್ಯವಾಗಲಿಲ್ಲ. ಹೀಗಾಗಿ "ನನ್ನನ್ನು ಕ್ಷಮಿಸಿ, ಸೋಲಿನ ಜವಾಬ್ದಾರಿಯನ್ನು ತೆಗೆದುಕೊಳ್ಳುತ್ತೇನೆ" ಎಂದು ಅವರು ಹೇಳಿದ್ದಾರೆ.ಸಂಸತ್ ಚುನಾವಣೆಯಲ್ಲಿನ ಸೋಲು ಸ್ವೀಕಾರ ಮಾಡುತ್ತೇನೆ, ವಿರೋಧ ಪಕ್ಷದ ಲೇಬರ್ ಪಾರ್ಟಿ 300 ಕ್ಕೂ ಹೆಚ್ಚು ಸ್ಥಾನಗಳನ್ನು ಗೆದ್ದಿದೆ .ಹೀಗಾಗಿ ಆ ಪಕ್ಷ ಮತ್ತು ಅದರ ನಾಯಕರನ್ನು ಅಭಿನಂಧಿಸುವುದಾಗಿ ತಿಳಿಸಿದ್ದಾರೆ.ಸಂಸತ್ ಚುನಾವಣೆ ಫಲಿತಾಂಶದಲ್ಲಿ ಲೇಬರ್ ಪಕ್ಷ ಬಾರಿ ಬಹುಮತ ಪಡೆಯುತ್ತದ್ದಂತೆ ಹಾಲಿ ಪ್ರಧಾನಿ ರಿಷಿ ಸುನಕ್, ಚುನಾವಣೆಯ ಸೋಲಿನ ನೈತಿಕ ಹೊಣೆ ಹೊರುವುದಾಗಿ ಹೇಳಿದರು.ಸಾರ್ವತ್ರಿಕ ಚುನಾವಣೆಯಲ್ಲಿ ಲೇಬರ್ ಪಾರ್ಟಿ ಗೆದ್ದಿದೆ, ಲೇಬರ್ ಪಕ್ಷದ ನಾಯಕ ಸರ್ ಕೀರ್ ಸ್ಟಾರ್ಮಗೆ ಕರೆ ಮಾಡಿ ಅಭಿನಂಧನೆ ಸಲ್ಲಿಸಿರುವುದಾಗಿ ತಿಳಿಸಿರುವ ಅವರು ಅಧಿಕಾರ ಶಾಂತಿಯುತವಾಗಿ ಮತ್ತು ಕ್ರಮಬದ್ಧವಾಗಿ, ಎಲ್ಲಾ ಕಡೆಯಿಂದಲೂ ಸದ್ಭಾವನೆಯೊಂದಿಗೆ ಕೈ ಬದಲಾಗುತ್ತದೆ ಎಂದಿದ್ದಾರೆ.

ಕೀರ್ ಸ್ಟಾರ್ಮರ್ ಅವರ ಲೇಬರ್ ಪಕ ಆರ್ಥಿಕತೆ, ಸಾರ್ವಜನಿಕ ಸೇವೆಗಳು ಮತ್ತು ಕುಸಿಯುತ್ತಿರುವ ಜೀವನಮಟ್ಟವನ್ನು ಹೊಂದಿರುವ ಎದುರಿಸುವ ಶಕ್ತಿ ನೀಡಲಿ ಎಂದು ಹಾರೈಸಿದ್ದಾರೆ.ಎರಡನೆಯ ಮಹಾಯುದ್ಧದ ನಂತರ ಬ್ರಿಟನ್‌ನ ತೆರಿಗೆ ಹೊರೆಯು ಅತ್ಯಧಿಕ ಮಟ್ಟಕ್ಕೆ ಏರಲಿದೆ, ನಿವ್ವಳ ಸಾಲ ವಾರ್ಷಿಕ ಆರ್ಥಿಕ ಉತ್ಪಾದನೆಗೆ ಬಹುತೇಕ ಸಮನಾಗಿದೆ, ಜೀವನಮಟ್ಟ ಕುಸಿದಿದೆ ಮತ್ತು ಸಾರ್ವಜನಿಕ ಸೇವೆಗಳು ಕುಸಿದ್ದರಿಂದ ಹಾಲಿ ಪ್ರಧಾನಿ ರಿಷಿ ಸುನಕ್‌ಗೆ ಹಿನ್ನಡೆ ಆಗಿದೆ ಎಂದು ರಾಜಕೀಯ ನಾಯಕರು ವಿಶ್ಲೇಷಿಸಿದ್ದಾರೆ.

## ಕಲರ್ಸ್ ನಲ್ಲಿ ಹೊಸಧಾರಾವಾಹಿ ನನ್ನದೇವ್ರು




ದಾವಣಗೆರೆ:– ಕೌಟುಂಬಿಕ ಮೌಲ್ಯಗಳನ್ನು ಬಿಂಬಿಸುವ ಸದಭಿರುಚಿಯ ಧಾರಾವಾಹಿಗಳಿಗೆ ಹೆಸರಾದ ಕಲರ್ಸ್ ಕನ್ನಡ ಇದೀಗ ನನ್ನದೇವ್ರು ಎಂಬ ಹೊಸಕತೆಯನ್ನು ಹೊತ್ತು ತಂದಿದೆ. ಜುಲೈ 8 ರಿಂದ ಪ್ರಸಾರವಾಗಲಿದ್ದು, ಸೋಮವಾರದಿಂದ ಶುಕ್ರವಾರದ ತನಕ ಪ್ರತಿ ಸಂಜೆ ಆರೂವರೆಗೆ ವೀಕ್ಷಿಸಬಹುದು.ಅಶ್ವಿನಿ ನಕ್ಷತ್ರ ದಿಂದ ಮನೆ ಮಾತಾಗಿದ್ದ ಮಯೂರಿ ಮತ್ತೆ ಕಿರುತೆರೆಗೆ ಮರಳಿದ್ದು, ಉದ್ಯಮಿ ಸಚ್ಚಿದಾನಂದಗೆ ಸೇರಿದ ಆಸ್ಪತ್ರೆಯೊಂದರಲ್ಲಿ ಬಡ ನರ್ಸ್ ಪಾತ್ರ ಇವರದು. ಸಚ್ಚಿದಾನಂದನ ಇಪ್ಪತ್ತು ವರ್ಷದ ಮಗಳಿಗೆ ಅಪ್ಪನನ್ನು ಕಂಡರೆ ಇಷ್ಟವಿಲ್ಲ. ತನ್ನಿಂದ ದೂರಾಗಿ ಬದುಕುತ್ತಿರುವ ಮಗಳ ವಿಶ್ವಾಸವನ್ನು ಮರಳಿ ಗಳಿಸಿಕೊಳ್ಳಲು ಹಲುಬುತ್ತಿರುವ ಸಚ್ಚಿದಾನಂದನ ಬದುಕಲ್ಲಿ ಮಯೂರಿಯ ಪ್ರವೇಶವಾಗುತ್ತದೆ. ಸಚ್ಚಿದಾನಂದ ಬಾಳನ್ನು ಸರಿದಾರಿಗೆ ತರುವ ಹಾದಿಯಲ್ಲಿ ಮಯೂರಿ ಎದುರಿಸುವ ಸವಾಲುಗಳೇನು ಎಂಬುದೇ ಮುಂದಿನಕತೆ. ಸುತ್ತಲಿನವರ ಸಂಚುಗಳಿಂದ ಮಯೂರಿ ಹೇಗೆ ಸಚ್ಚಿದಾನಂದನನ್ನು ಕಾಪಾಡುತ್ತಾಳೆ ಎಂಬುದು ಕುತೂಹಲ.ಮಯೂರಿ ತುಂಬಾ ವರ್ಷಗಳ ನಂತರ ಟಿವಿಗೆ ಮರಳಿ 'ನನ್ನ ದೇವ್ರು' ನಾಯಕಿಂ–ಯಾಗಿದ್ದಾರೆ. ನಾಯಕನಾಗಿ ನಟಿಸುತ್ತಿರುವ ಅವಿನಾಶ ದಿವಾಕರ ಹಾಸ್ಯ ಚಕ್ರವರ್ತಿ ನರಸಿಂಹರಾಜು ಅವರ ಮೊಮ್ಮಗ ಅನ್ನುವುದು ಇನ್ನೊಂದು ವಿಶೇಷ. ಇವರೊಟ್ಟಿಗೆ ಯುಕ್ತಾ ಮಲ್ನಾಡ್, ಸ್ವಾತಿ , ವಿಮನೋಹರ್ , ರೇಖಾದಾಸ್ , ನಿಶ್ಚಿತಾಗೌಡ , ಮಾಲತಿ ಸುಧೀರ್ , ಯಮುನಾ ಶ್ರೀನಿಧಿ, ರವಿಬ್ರಹ್ಮ , ಅಭಿಷೇಕ ಶ್ರೀಕಾಂತ ಸೇರಿದಂತೆ ನಟ ನಟಿಯರು ಇದ್ದಾರೆ. ಶ್ರುತಿನಾಯ್ಡು 'ನನ್ನದೇವ್ರು' ನಿರ್ಮಿಸಿದ್ದಾರೆ. ರಮೇಶ್ ಇಂದಿರಾ 'ನನ್ನದೇವ್ರು' ನಿರ್ದೇಶಿಸುತ್ತಿದ್ದಾರೆ.ಕಲರ್ಸ್ ಕನ್ನಡದ ಬ್ಯುಸಿನೆಸ್ ಹೆಡ್ ಪ್ರಶಾಂತ ನಾಯಕ್,ಸದಾ ಹೊಸತನಕ್ಕಾಗಿ ತುಡಿಯುವ ಕಲರ್ಸ್ ಕನ್ನಡ ಈ ಹೊಸ ಧಾರಾವಾಹಿಯ ಮುಖಾಂತರ ಮುಗ್ಧತೆ ಮತ್ತು ಪ್ರಾಮಾಣಿಕತೆ ತಂದೊಡ್ಡುವ ಸವಾಲುಗಳ ಕತೆಯೊಂದನ್ನು ವೀಕ್ಷಕರಿಗೆ ಉಣಬಡಿಸಲಿದೆ ಎಂದು ಹೇಳಿದರು. ಸಿನಿಮಾ ಮುಖಾಂತರ ನಿಮ್ಮ ಫೋನಿನಲ್ಲೂ ನೋಡಬಹುದಾಗಿದೆ.

## ಶವಸಂಸ್ಕಾರಕ್ಕೆ ಸಿಗದ ಭೂಮಿ;ಗ್ರಾಮಸ್ಥರ ಪ್ರತಿಭಟನೆ



ದಾವಣಗೆರೆ:–

ಹಿಂದುಗಳ ಶವಸಂಸ್ಕಾರಕ್ಕೆ ಹಿಂದು ರುದ್ರಭೂಮಿಯಲ್ಲೇ ಅವಕಾಶ ನೀಡದಿರುವುದನ್ನು ಖಂಡಿಸಿ ಚನ್ನಗಿರಿ ತಾ. ಸೋಮಲಾಪುರ ಗ್ರಾಮಸ್ಥರು ನಗರದ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಿದರು.ನಗರದ ಜಿಲ್ಲಾಧಿಕಾರಿ ಕಚೇರಿ ಬಳಿ ಚನ್ನಗಿರಿ ತಾ. ಸಂತೇಬೆನ್ನೂರು ಸಮೀಪದ ಸೋಮ ಲಾಪುರ ಗ್ರಾಮಸ್ಥರು ಹಿಂದು ಜಾಗರಣಾ ವೇದಿಕೆ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್‌ರಿಗೆ ಮನವಿ ಪತ್ರವನ್ನು ಅರ್ಪಿಸಿದರು.ಇದೇ ವೇಳೆ ಮಾತನಾಡಿದ ಗ್ರಾಮಸ್ಥರು, ಸಂತೇಬೆನ್ನೂರಿಗೆ ಹೊಂದಿ ಕೊಂಡಿರುವ ಸೋಮಲಾಪುರ ಗ್ರಾಮದಲ್ಲಿ ಸ್ಮಶಾನ ಜಾಗಕ್ಕೆಂದು 5 ಎಕ–ರೆ ಜಮೀನಿದೆ. ಇದನ್ನು ಮುಸ್ಲಿಂ ವಕ್ಫ್ ಬೋರ್ಡ್‌ಗೆ ಅಕ್ರಮವಾಗಿ ಮಾಡಿಕೊಟ್ಟಿದ್ದು,ಈಗ ಹಿಂದುಗಳಲ್ಲಿ ಯಾರೇ ಸಾವನ್ನಪ್ಪಿದರೂ ಅಂತ್ಯ ಸಂಸ್ಕಾರಕ್ಕೆ ಸ್ಮಶಾನದ ಇಲ್ಲದ ಪರಿಸ್ಥಿತಿ ನಿರ್ಮಾವಾಗಿದೆ ಎಂದರು. ಇಲ್ಲಿ ಬಹುತೇಕ ಎಲ್ಲರೂ ಕೃಷಿಕರಾಗಿದ್ದು, ತಮ್ಮ ಗ್ರಾಮದಲ್ಲಿ ಸುಮಾರು 2567 ಹಿಂದುಗಳಿದ್ದಾರೆ. ಮುಸ್ಲಿಮರ ಜನಸಂಖ್ಯೆ ಅಂದಾಜು 180 ಜನರಷ್ಟೇ. ಸೋಮಲಾಪುರದಲ್ಲಿ ಪುರಾತನ ಶ್ರೀ ದುರ್ಗಾಂಬಿಕಾ ದೇವಸ್ಥಾನ, ಬೀರಪ್ಪನ ಗುಡಿ, ಶ್ರೀ ಬನಶಂಕರಿ ದೇವಸ್ಥಾನ, ಶ್ರೀ ಮಂಜುಣಟಿಜಜಜುಟಿಜಜನಾಥ ಸ್ವಾಮಿ, ಶ್ರೀ ಬಸವೇಶ್ವರ ದೇವಸ್ಥಾನಗಳೂ ಇವೆ ಎಂದು ಅವರು ತಿಳಿಸಿದರು.ಇಡೀ ಗ್ರಾಮದ ಹಿಂದುಗಳು ರಿ.ಸ.ನಂ.111ರ ಪೂರ್ಣ ವಿಸ್ತೀರ್ಣ 8.31 ಎಕರೆ ಇದ್ದು, ಇದರಲ್ಲಿ 5.31 ಎಕರೆ ಪ್ರದೇಶದಲ್ಲಿ ಸಂಪ್ರದಾಯಬದ್ಧವಾಗಿ ಶವ ಸಂಸ್ಕಾರ ಮಾಡಿಕೊಂಡು ಬಂದಿದ್ದೇವೆ. ಇಂದಿಗೂ ಅದನ್ನು ರುದ್ರಭೂಮಿಯಾಗಿ ಬಳಸುತ್ತಿದ್ದೇವೆ. 2024ನೇ ಬೇಸಿಗೆ ಹಂಗಾಮಿನಲ್ಲಿ ರುದ್ರಭೂಮಿಯಲ್ಲಿ ಸಾಕಷ್ಟು ಗುಂಡಿ ಬಿದ್ದಿದ್ದರಿಂದ ಅವುಗಳನ್ನು ಮುಚ್ಚಿ, ಸಮತಟ್ಟು ಪ್ರದೇಶವನ್ನು ಮಾಡಲು ಇಡೀ ಗ್ರಾಮಸ್ಥರು ಸೂಳೆಕೆರೆ ಬತ್ತಿದ್ದರಿಂದ ಕೆರೆ ಅಂಗಳದ ಮಣ್ಣು ತಂದು ಹಾಕಿದ್ದೆವು ಎಂದು ಅವರು ಹೇಳಿದರು.ಈಗ ಸೋಮಲಾಪುರ ಗ್ರಾಮದ ಮುಸ್ಲಿಂ ಸಮಾಜದ 15–20 ಜನರು ರುದ್ರಭೂಮಿ ಜಾಗ ತಮಗೆ ಸೇರಿದ್ದು, ಅದು ವಕ್ಫ್ ಆಸ್ತಿಯೆಂದು, ಅಲ್ಲಿ ಯಾವುದೇ ಅಭಿವೃದ್ಧಿ ಕೆಲಸ ಮಾಡಬಾರದು, ಶವ ಸಂಸ್ಕಾರ ಮಾಡಬಾರದೆಂದು, ಒಂದು ವೇಳೆ ಶವ ಸಂಸ್ಕಾರ ಮಾಡಬೇಕೆಂದರೆ ತಮ್ಮನ್ನು ಕೇಳಿಯೇ ಮಾಡಬೇಕೆಂಬುದಾಗಿ ಹೇಳುತ್ತಿದ್ದಾರೆ. ಗ್ರಾಮದಲ್ಲಿ ಶಾಂತಿ ಭಂಗ ಆಗಬಾರದು, ಸಾಮ ರಸ್ಯಕ್ಕೆ ಧಕ್ಕೆ ಆಗಬಾರದೆಂದು ಸೌಹಾರ್ದತೆಯಿಂದ ಎಲ್ಲರೂ ಇರಬೇಕೆಂಬ ಕಾರಣಕ್ಕೆ ರುದ್ರಭೂಮಿ ಅಭಿವೃದ್ಧಿ ಕೆಲಸ ಸ್ಥಗಿತಪಡಿಸಿದ್ದೇವೆ ಎಂದು ಅವರು ತಿಳಿಸಿದರು.ಕಂದಾಯ ಇಲಾಖೆಗೆ ತಾವು ಮಾಹಿತಿ ಕೇಳಿದಾಗ ಅದು ಮೂಲತಃ ಕಂದಾಯ ಇಲಾಖೆಗೆ ಸೇರಿದ್ದಾಗಿದೆ. ಆರ್‌ಆರ್ ನಂ.373ರಂದೆ ಖಬರಸ್ಥಾನ ಎಂಬುದಾಗಿ ನಮೂದಿಸಲಾಗಿದೆ. ನಂತರ ದಾಖಲಾತಿಗಳಲ್ಲಿ ಎಂ ಆರ್‌ಎಂ ನಂ.2–1984–85ರಲ್ಲಿ ಅರಣ್ಯ ಇಲಾಖೆ ಎಂಬು ದಾಗಿ ನಮೂದಿಸಲಾಗಿದೆ. ನಂತರ ವರ್ಷದಲ್ಲಿ ಜಮೀನಿನಲ್ಲಿ ಉಪಯೋಗವನ್ನು ಖುಷ್ಕಿ ಎಂಬುದಾಗಿ ದಾಖಲಿಸಲಾಗಿದೆ. 12.1.1982ರ ಸಾರ್ವಜನಿಕರ ತಿಳಿವಳಿಕೆಯಲ್ಲಿ 3 ಎಕರೆಯಿಂದ 8.31 ಎಕ–ರೆಗೆ ತಿದ್ದುಪಡಿ ಮಾಡಿರುವುದು ಕಂಡು ಬಂದಿದೆ ಎಂದು ಅವರು ಆರೋಪಿಸಿದರು.ರುದ್ರಭೂಮಿಗಾಗಿ ಬಳಸಿದ್ದಕ್ಕೆ ಅಲ್ಲಿ ಇಂದಿಗೂ ಸಾಕಷ್ಟು ಅಂತ್ಯಕ್ರಿಯೆ ನಡೆಸಿದ ಕುರುಹುಗಳಿವೆ. ಯಾರೋ ದುರಾಲೋಚನೆಯಿಂದ ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿ, ಮೋಸ, ವಂಚನೆಯಿಂದ ಹಿಂದುಗಳ ರುದ್ರಭೂಮಿ ಜಾಗವನ್ನು ಖಬರಸ್ಥಾನ ಎಂಬುದಾಗಿ ನಮೂದಿಸಿದ್ದಾರೆ. ಈ ರೀತಿ ದಾಖಲಿಸಿರುವುದಕ್ಕೆ ಯಾವುದೇ ಆದಾರ ಇಲ್ಲ. ಹಾಗಿದ್ದರೆ ಯಾವುದೇ ಆದಾರ ಇಲ್ಲದೇ ದಾಖಲಿಸಿದ್ದು ಹೇಗೆ? ಇಡೀ 8.31 ಎಕರೆ ಪ್ರದೇಶವನ್ನು ಆರ್‌ಟಿಸಿಯಲ್ಲಿ ಖಬರಸ್ಥಾನ ಎಂಬುದಾಗಿ ದಾಖಲಿಸಿದ್ದಕ್ಕೆ ಆದಾರ ಇಲ್ಲ. ಮುಸ್ಲಿಂ ಬಾಹುಳ್ಯ ಗ್ರಾಮಸ್ಥರು ನಮ್ಮ ಗ್ರಾಮದಲ್ಲಿ ಹಸ್ತಕ್ಷೇಪ ಮಾಡದಂತೆ, ಗ್ರಾಮದ ಸಾಮರಸ್ಯಕ್ಕೆ ಧ–ಕ್ಕೆ ಬರುವಂತೆ ಮಾಡುವ ಸಾಧ್ಯತೆ ಇದ್ದು, ಅದನ್ನು ತಡೆಯಬೇಕು ಎಂದು ಅವರು ಒತ್ತಾಯಿಸಿದರು.

## ಮಂಗಳೂರು: ಡೆಂಘಿ ಜ್ವರ, ಸೊಳ್ಳೆ ಉತ್ಪತ್ತಿ ತಾಣ ನಾಶಪಡಿಸುವ ಜಾಗೃತಿ ಅಭಿಯಾನಕ್ಕೆ ಚಾಲನೆ

ನಿಲ್ಲದಂತೆ ಎಚ್ಚರಿಕೆ ವಹಿಸುವುದು ಅಗತ್ಯ. ಈಡಿಸ್ ಸೊಳ್ಳೆಯ ಉತ್ಪತ್ತಿ ತಾಣಗಳನ್ನ ಪತ್ತೆ ಹಚ್ಚಿ ಅದನ್ನ ನಾಶಪಡಿಸುವ ಕಾರ್ಯ ನಡೆಯುತ್ತಿದೆ ಎಂದರು.

ದಿನೇಶ್ ಗುಂಡೂರಾವ್ ಸಾಂದರ್ಭಿಕ ಚಿತ್ರ

ಡೆಂಘಿ ಭೀತಿ: ಸರ್ಕಾರಿ ಆಸ್ಪತ್ರೆಗಳಲ್ಲಿ ದಾಖಲು ಹೆಚ್ಚಳ

ಡೆಂಗಿ ಜ್ವರ ಹೆಚ್ಚು ಕಂಡುಬಂದಿರುವ ಹಾಟ್ ಸ್ಪಾಟ್ ಗಳನ್ನ ಗುರುತಿಸಿ, ಫೀವರ್ ಕ್ಲಿನಿಕ್ ಗಳನ್ನ ತೆರಯಲು ಸೂಚಿಸಲಾಗಿದೆ. ಇಂಥಹ ಸ್ಥಳಗಳಲ್ಲಿ ಯಾರಿಗೆ ಜ್ವರ ಬಂದರು ಡೆಂಗಿ ಟೆಸ್ಟಿಂಗ್ ನಡೆಸಿ ಸಾಧ್ಯವಾದಷ್ಟು ಮುಂಚಿತವಾಗಿಯೇ ಪತ್ತೆ ಮಾಡಿ ಚಿಕಿತ್ಸೆ ಒದಗಿಸಲು ಸೂಚಿಸಲಾಗಿದೆ. ಇದರಿಂದ ಸಾವುಗಳನ್ನ ತಡೆಯಲು ಸಾಧ್ಯ. ಡೆಂಗಿ ನಿಯಂತ್ರಣದಲ್ಲಿ ಆರೋಗ್ಯ ಇಲಾಖೆ ಜೊತೆಗೆ ಗ್ರಾಮೀಣಾಭಿವೃದ್ಧಿ ಇಲಾಖೆ, ಜಿಲ್ಲಾಡಳಿತ, ಸ್ಥಳೀಯ ಪಾಲಿಕೆ ಅಧಿಕಾರಿಗಳು ಹಾಗೂ ಶಿಕ್ಷಕರನ್ನ ಬಳಸಿಕೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು.

## ಜೀವನ ಶೈಲಿಯಲ್ಲಿನ ಬದಲಾವಣೆಯಿಂದ ಬೆನ್ನು ನೋವು ನಿವಾರಣೆ; ಡಾಜೆ ರಘುಕುಮಾರ್

ಸಮತೋಲಿತ ಆಹಾರ ಬಳಕೆ ಮತ್ತು ಜೀವನ ಶೈಲಿ ಬದಲಾವಣೆಗೆ ಹೆಚ್ಚಿನ ಗಮನ ನೀಡಬೇಕು ಎಂದರು.ಚಿಕ್ಕ ಮಕ್ಕಳಿಂದ ಹಿಡಿದು ಅಬಾಲವೃದ್ಧರಾದಿಯಾಗಿ ಎಲ್ಲರಲ್ಲೂ ಬೆನ್ನು ನೋವಿನ ಸಮಸ್ಯೆ ಕಂಡು ಬರುತ್ತದೆ. ಜೀವನದಲ್ಲಿ ಒಮ್ಮೆಯಾದರೂ ಬೆನ್ನು ನೋವಿನ ಸಮಸ್ಯೆ ಕಾಡುತ್ತದೆ. ಅನೇಕ ಕಾರಣಗಳಿಂದ ಬೆನ್ನುನೋವು ಅನುಭವಿಸಬೇಕಾಗುತ್ತದೆ. ಮುಂಜಾಗ್ರತೆಯೇ ಸೂಕ್ತ ಪರಿಹಾರ ಎಂದು ತಿಳಿಸಿದರು.ಬೆನ್ನಿನ ಸ್ತಂಬವು ಬೆನ್ನೆಲುಬು ಮತ್ತು ಮಾಂಸಖಂಡಗಳಿಂದ ರಚನೆಯಾಗಿದೆ. ಬೆನ್ನು ತಲೆಯ ಭಾರವನ್ನು ಹೊತ್ತುಹೊಟ್ಟೆಯ ತೂಕವನ್ನು ಕಾಲುಗಳಿಗೆ ರವಾನಿಸುತ್ತದೆ. ಬೆನ್ನು ನಮ್ಮೆಲ್ಲರ ಭಾವಭಂಗಿಯನ್ನು ಕಾಪಾಡಿ ಬಾಗಿಸು ಏಕೆ ಯನ್ನು ಒದಗಿಸುತ್ತದೆ ಎಂದು ತಿಳಿಸಿದರು.ಬೆನ್ನುನೋವಿಗೆ ನೂರಾರು ಕಾರಣಗಳಿವೆ. ಮಾಂಸಖಂಡಗಳ ಮೇಲಿನ ಒತ್ತಡ ಅಥವಾ ಸೆಳೆತ ಸಾಮಾನ್ಯ ಕಾರಣ ಆಗಿದೆ. ಬೆನ್ನಿನ ರಚನಾತ್ಮಕ ಅಥವಾ ಜನ್ಮಜಾತ ತೊಂದರೆಗಳು, ಅನುಚಿತ ಭಂಗಿ, ಮೂಳೆ ಸವೆತ, ಸಂಧಿವಾತ, ಔದ್ಯೋಗಿಕ ಮತ್ತು ಸೋಂಕು ಬೆನ್ನುನೋವಿಗೆ ಕಾರಣವಾಗಬಹುದು. ಬೆನ್ನುನೋವಿಗೆ ಕೆಲವೊಂದು ಪೂರಕವಾದ ಕಾರಣಗಳೂ ಇವೆ. ಜಡ ಜೀವನಶೈಲಿ, ಮದ್ಯಪಾನ, ಧೂಮಪಾನ, ವಯೋಮಾನ, ಶಾರೀರಿಕ ಬೊಜ್ಜು ಮುಖ್ಯ ಕಾರಣಗಳು ಎಂದು ತಿಳಿಸಿದರು.ಬೆನ್ನುನೋವು ಕಾಣಿಸಿಕೊಂಡಲ್ಲಿ ರೋಗ ಲಕ್ಷಣದ ಇತಿಹಾಸ, ದೈಹಿಕ ಪರೀಕ್ಷೆ, ಕ್ಷ–ಕಿರಣ, ಎಂಆರ್‌ಐ ಇತರೆ ಪರೀಕ್ಷೆಗಳಿಂದ ದೃಢಪಡಿಸಿಕೊಳ್ಳಲಾಗುತ್ತದೆ. ಕಾರಣಗಳನ್ನು ಹುಡುಕಿ ಸೂಕ್ತ ಚಿಕಿತ್ಸೆ ಒದಗಿಸಬಹುದು. ಇಂದಿನ ಆಧುನಿಕ ವೈದ್ಯಕೀಯ ಯುಗದಲ್ಲಿ ಔಷ ಮತ್ತು ಶಸ್ತ್ರಚಿಕಿತ್ಸೆಯ ಮೂಲಕವೂ ಬೆನ್ನುನೋವನ್ನು ನಿವಾರಣೆ ಮಾಡಬಹುದು ಎಂದು ತಿಳಿಸಿದರು.ಯಾವುದೇ ವಯಸ್ಸಿನವರಾದದರೂ ಸರಿ ಬೆನ್ನುನೋವನ್ನ ಯಾವುದೇ ಕಾರಣ–ಕ್ಕೂ ನಿರ್ಲಕ್ಷ ಮಾಡಲೇಬಾರದು.ವೈದ್ಯರನ್ನ ಸಂಪರ್ಕಿಸಿ, ಸಲಹೆ, ಚಿಕಿತ್ಸೆ ಪಡೆಯುವುದು ಸೂಕ್ತ. ಆರಂಭಿಕ ಹಂತದಲ್ಲೇ ಚಿಕಿತ್ಸೆ ಪಡೆಯುವ ಮೂಲಕ ಬೆನ್ನುನೋವಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ತಿಳಿಸಿದರು.

## ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಾರ್ಯಾಲಯದಿಂದ ಆಕ್ಷೇಪಣೆಗೆ ಅರ್ಜಿ ಆಹ್ವಾನ

ರಾಯಚೂರು:–

ಜಿಲ್ಲಾ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಾರ್ಯಾಲಯದ ವ್ಯಾಪ್ತಿಯಲ್ಲಿ ಬರುವ ಸಹಕಾರ ಸಂಘಗಳು, ಹಲವು ವರ್ಷಗಳಿಂದ ಸಂಘದ ಉದ್ದೇಶಿತ ಕಾರ್ಯನಿರ್ವಹಿಸದೇ ಸ್ಥಗಿತಗೊಂಡಿರುವುದರಿಂದ ಸಂಘಗಳನ್ನು ಸಮಾಪನೆಗೊಳಿಸಬೇಕಾಗಿರುತ್ತದೆ.

ಈ ಸಂಘಗಳನ್ನು ಸಮಾಪನೆಗೊಳಿಸಲು ಸದಸ್ಯರಿಂದ ಅಥವಾ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆಗಳಿದ್ದಲ್ಲಿ 15 ದಿನಗಳೊಗಾಗಿ ಆಕ್ಷೇಪಣೆಗೆ ಅರ್ಜಿಯನ್ನು ಸಲ್ಲಿಸಬ ಹುದಾಗಿದೆ. ರಾಯಚೂರು ತಾಲೂಕಿನ ಗಾಣಧಾಳ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ, ರಾಯಚೂರು ತಾಲೂಕಿನ ಕಸ್ಬೆಕ್ಯಾಂಪ್ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಮಾನವಿ ತಾಲೂಕಿನ ಮುರಹರಪೂರು ಹಾಲು ಉತ್ಪಾದಕರ ಸಹಕಾರ ಸಂಘ ನಿ, ಮಾನವಿ ತಾಲೂಕಿನ ಮದ್ಲಾಪೂರುಕ್ಯಾಂಪ್ ಹಾಲು ಉತ್ಪಾದಕರ ಸಹಕಾರ ಸಂಘ ನಿ, ಶಾಸ್ತ್ರೀಕ್ಯಾಂಪ್. ಮಾನವಿ ತಾಲೂಕಿನ ಶಾಸ್ತ್ರಿಕ್ಯಾಂಪ್ ಹರನಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಸಿರವಾರ ತಾಲೂಕಿನ ಅತ್ತನೂರು ಹಾಲು ಉತ್ಪಾದಕರ ಸಹಕಾರ ಸಂಘ ನಿ, ಸಿರವಾರ ತಾಲೂಕಿನ ಚಾಗಬಾವಿಕ್ಯಾಂಪ್ ಹಾಲು ಉತ್ಪಾದಕರ ಸಹಕಾರ ಸಂಘ ನಿ, ಸಿರವಾರ ತಾಲೂಕಿನ ಆಂಜನೇಯ್ಯಕ್ಯಾಂಪ್ ಬಲ್ಲಟಗಿ ಆಂಜನೇಯ್ಯ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಸಿರವಾರ ತಾಲೂಕಿನ ಯಂಕನಗಡ್ಡೆ ಕ್ಯಾಂಪ್ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಸಹಕಾರ ಸಂಘಗಳ ಸಂಬಂಧಪಟ್ಟ ಸಹಕಾರ ನಿಬಂಧಕರಿಗೆ ನಿಗಧಿತ ಕಾಲಾವಧಿಯಲ್ಲಿ ಯಾವುದೇ ಆಕ್ಷೇಪಣೆ ಮತ್ತು ಅದನ್ನು ಸಮರ್ಥಿಸುವ ದಾಖಲೆಗಳ ಸಹಿತ ಸಲ್ಲಿಸಬಹುದಾಗಿದೆ.

ಆಕ್ಷೇಪಣೆ ಸಲ್ಲಿಸದಿದ್ದಲ್ಲಿ ಯಾವುದೇ ಆಕ್ಷೇಪಣೆ ಇಲ್ಲ ಎಂದು ಪರಿಗಣಿಸಿ ಈ ಸ್ಥಗಿತ ಸಹಕಾರ ಸಂಘಗಳ ಸಮಾಪನೆಗಾಗಿ ಕ್ರಮವಹಿಸಲಾಗುವುದೆಂದು ರಾಯಚೂರಿನ ಉಪ ವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 8 ಲಕ್ಷ ಮೌಲ್ಯದ 330ಚೀಲ ಭತ್ತದ ಚೀಲ ಕಳ್ಳತನ : ಪೊಲೀಸರ ಕಾರ್ಯಾಚರಣೆ ಕಳ್ಳನ ಬಂಧನ



ಸಿರುಗುಪ್ಪ:–

ತಾಲ್ಲೂಕಿನ ತಾಳೂರು ಗ್ರಾಮದ ಬಳಿಯ ಗೋದಾಮಿನಲ್ಲಿ ಸಂಗ್ರಹಿಸಿ ಇಡಲಾಗಿದ್ದ ಭತ್ತ ತುಂಬಿದ ಚೀಲಗಳ ಕಳ್ಳತನ ಪ್ರಕರಣ ಭೇದಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಖಚಿತ ಮಾಹಿತಿ ಮೇರೆಗೆ ಸಿರುಗುಪ್ಪ ಪೊಲೀಸ್ ಉಪಾಧೀಕ್ಷಕ ವೆಂಕಟೇಶ್, ತೆಕ್ಕಲಕೋಟೆ ವೃತ್ತ ನಿರೀಕ್ಷಕ ಸುಂದರೇಶ್ ಕೆ ಹೊಳೆಣ್ಣವರ್, ಪಿಎಸ್ಐ(ಕಾ&ಸು) ಶಾಂತಮೂರ್ತಿ, ಸಿರಿಗೇರಿ ಠಾಣೆಯ ಪಿಎಸ್ಐ (ತನಿಖೆ) ಶ್ರೀನಿವಾಸ ಇವರ ನೇತೃತ್ವದ ತಂಡ ಬುಧವಾರ ದಾಳಿ ನಡೆಸಿ ಆರೋಪಿ ಚಿತ್ರದುರ್ಗ ಜಿಲ್ಲೆಯ ಚಿಪ್ಪಿನಕೆರೆ ಗ್ರಾಮದ ಮುದ್ದುರಾಜನನ್ನು ಬಂಧಿಸಿ 8 ಲಕ್ಷ ಮೌಲ್ಯದ 330 ಚೀಲ ಭತ್ತ ತುಂಬಿದ ಚೀಲಗಳನ್ನು ವಶಪಡಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ. ಕಳೆದ ವರ್ಷ ಜುಲೈ 23ರಂದು ಪ್ರಕರಣ ದಾಖಲಾಗಿತ್ತು.

ದಾಳಿಯ ಸಂದರ್ಭದಲ್ಲಿ ತೆಕ್ಕಲಕೋಟೆ ಪೊಲೀಸ್ ಠಾಣೆಯ ಪೇದೆಗಳಾದ ನಾಗರಾಜ, ರಾಮದಾಸ್, ಅಯ್ಯಪ್ಪ, ಬಿ, ಕಾಸೀಮಸ್ತಾ ವಾಲೀಕಾರ್, ಚಂದ್ರಶೇಖರ್ ಸ್ವಾಮಿ ಎಆರ್ಎಸ್ಐ ಹಾಗು ಮೋಕಾ ಪೊಲೀಸ್ ಠಾಣೆಯ ಅನ್ವರ್ ಬಾಷಾ, ಸಿರಿಗೇರಿ ಪೊಲೀಸ್ ಠಾಣೆಯ ರಾಮಾಂಜಿನಿ, ವಿನೋದ್‌ಗೌಡ, ಅಮರೇಶ, ಪ್ರಭಾಕರ ಭಾಗವಹಿಸಿದ್ದರು. ಪೊಲೀಸರ ಈ ಕಾರ್ಯವನ್ನು ಬಳ್ಳಾರಿ ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

## ಡಿಐಟಿ ಕಾಲೇಜಿಗೆ ಟೇಬಲ್ ಟೆನ್ನಿಸ್‌ನಲ್ಲಿ ದ್ವಿತೀಯ ಸ್ಥಾನ

ಹೊಸಪೇಟೆ;–

ಇತ್ತೀಚೆಗೆ ಬಸವಕಲ್ಯಾಣದಲ್ಲಿ ನಡೆದ ವಿಟಿಯುವ ಕಲ್ಬುರ್ಗಿ ವಿಭಾಗ ಮಟ್ಟದ ಮಹಿಳೆಯರ ಟೇಬಲ್ ಟೆನ್ನಿಸ್ ಪಂದ್ಯಾವಳಿಯಲ್ಲಿ ಪಿಡಿಐಟಿ ಕಾಲೇಜು ವಿದ್ಯಾರ್ಥಿ ಗಳು ದ್ವಿತೀಯ ಸ್ಥಾನವನ್ನು ಪಡೆದಿದ್ದಾರೆ. ಜುಲೈ 1 ಮತ್ತು 2 ರಂದು ನಡೆದ ಪಂದ್ಯಾವಳಿಯಲ್ಲಿ ವಿಭಾಗದ 9 ತಂಡಗಳು ಪಾಲ್ಗೊಂಡಿದ್ದು ಪಿಡಿಐಟಿನ ವಿದ್ಯುತ್ ವಿಭಾಗದ ಕುಮಾರಿ ಚಂದನಾ, ಅಕ್ಷತಾ, ಎಐಎಂಎಲ್ ವಿಭಾಗದ ನಿಖಿತಾ ಭಾಗವಹಿಸಿ ಅದ್ಭುತ ಸಾಧನೆಯ ಮೂಲಕ ದ್ವಿತೀಯ ಸ್ಥಾನವನ್ನು ಪಡೆದಿದ್ದಾರೆ. ಅಲ್ಲದೆ ಮೈಸೂರಿನಲ್ಲಿ ನಡೆಯುವ ರಾಜ್ಯ ಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ. ಆಡಳಿತ ಮಂಡಳಿಯ ಅಧ್ಯಕ್ಷರು ಸದಸ್ಯರು ಹಾಗೂ ಬೋದಕ ಭೋದಕೇತರ ಸಿಬ್ಬಂದಿ ವಿದ್ಯಾರ್ಥಿನಿಯರ ಸಾಧನೆಗೆ ಹರ್ಷಿಸಿದ್ದಾರೆ. ವಿ.ಟಿ.ಯು ಕಲ್ಬುರ್ಗಿ ವಿಭಾಗ ಮಟ್ಟದ ಮಹಿಳೆಯರ ಟೇಬಲ್ ಟೆನ್ನಿಸ್ ಪಂದ್ಯಾವಳಿಗಳು ಬಸವಕಲ್ಯಾಣದ ಬಿ.ಕೆ.ಟಿ.ಇ ಇಂಜಿನಿಯರಿಂಗ್ ಕಾಲೇಜ್ ನಲ್ಲಿ ದಿನಾಂಕ ಜುಲೈ 1 ಮತ್ತು 2 ರಂದು ನಡೆದಿದ್ದು, ಈ ಪಂದ್ಯಾವಳಿಗಳಲ್ಲಿ 9 ಮಹಿಳೆಯರ ತಂಡಗಳು ಭಾಗವಹಿಸಿದ್ದು, ಹೊಸಪೇಟೆಯ ಪಿ.ಡಿ.ಐ.ಟಿ ಕಾಲೇಜಿನ ವಿದ್ಯಾರ್ಥಿನಿಯರಾದ ವಿದ್ಯುತ್ ವಿಭಾಗದ ಕು.ಚಂದನ, ಕು.




ಅಕ್ಷತಾ ಹಾಗೂ ಎ.ಐ.ಎಂ.ಎಲ್ ವಿಭಾಗದ ಕು.ನಿಖಿತಾ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದಿರುತ್ತಾರೆ ಮತ್ತು ಈ ವಿದ್ಯಾರ್ಥಿನಿಯರು ಮೈಸೂರಿನಲ್ಲಿ ನಡೆಯಲಿರುವ ರಾಜ್ಯಮಟ್ಟದ ಟೇಬಲ್ ಟೆನ್ನಿಸ್ ಪಂದ್ಯಾವಳಿಗಳಿಗೆ ಆಯ್ಕೆಯಾಗಿರುತ್ತಾರೆ ಎಂದು ತಿಳಿಸಲು ಹೆಮ್ಮೆಯ ವಿಷಯವಾಗಿದೆ. ಈ ವಿಜೇತರಿಗೆ ಪಿ.ಡಿ.ಐ.ಟಿ ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರಾದ ಕರಿಬಸವರಾಜ್ ಬಾದಾಮಿ, ಪ್ರಾಂಶುಪಾಲರಾದ ಡಾ.ಯು.ಎಂ.ರೋಹಿತ್, ಉಪಪ್ರಾಂಶುಪಾಲರಾದ ಪ್ರೊ. ಪಾರ್ವತಿ ಕಡ್ಲಿ, ದೈಹಿಕ ಶಿಕ್ಷಕ ನಿರ್ದೇಶಕರಾದ ಕೆ.ಎಸ್. ಮಂಜುನಾಥ್ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗದವರು ಅಭಿನಂದನೆಯನ್ನು ಸಲ್ಲಿಸಿರುತ್ತಾರೆ.

## ರಾಜ್ಯ–ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಕಾಶಿ ಮಾದರಿಯಲ್ಲಿ ದತ್ತನ ಕ್ಷೇತ್ರ ಅಭಿವೃದ್ಧಿ ಕೇಂದ್ರಕ್ಕೆ ಸಮಿತಿ ನಿಯೋಗ ತೆರಳಲು ನಿರ್ಧಾರ: ರುದ್ರಪ್ಪ ಲಮಾಣಿ

ಕಲಬುರಗಿ:–

ಜಿಲ್ಲೆಯ ಅಫಜಲಪೂರ ತಾಲೂಕಿನ ದತ್ತನ ಸುಕ್ಷೇತ್ರವಾದ ದೇವಲ ಗಾಣಗಾಪೂರಕ್ಕೆ ಕರ್ನಾಟಕವಲ್ಲದೆ ಪಕ್ಕದ ಆಂಧ್ರ ಪ್ರದೇಶ, ತೆಲಂಗಾಣಾ, ಮಹಾರಾಷ್ಟ್ರ ಸೇರಿದಂತೆ ಇತರೆ ರಾಜ್ಯಗಳಿಂದ ಅಗಮಿಸುವ ಭಕ್ತಾದಿಗಳ ಸಂಖ್ಯೆ ಹೆಚ್ಚಿರುವ ಕಾರಣ ಅಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ನೆರವಿನೊಂದಿಗೆ ಕಾಶಿ ಮಾದರಿಯಲ್ಲಿ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಪಡಿಸಲಾಗುವುದು ಎಂದು ಕರ್ನಾಟಕ ವಿಧಾನಸಭೆ ಉಪಾಧ್ಯಕ್ಷರು ಮತ್ತು ಕರ್ನಾಟಕ ವಿಧಾನಸಭೆ ಅರ್ಜಿಗಳ ಸಮಿತಿಯ ಅಧ್ಯಕ್ಷರಾಗಿರುವ ರುದ್ರಪ್ಪ ಮಾನಪ್ಪ ಲಮಾಣಿ ಹೇಳಿದರು.

ಗುರುವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದೇವಲ ಗಾಣಗಾಪೂರ ದೇವಸ್ಥಾನ ಅಭಿವೃದ್ಧಿ ಕುರಿತಂತೆ ನಡೆದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ದೇವಸ್ಥಾನ ಅಭಿವೃದ್ಧಿಗೆ ಕಲಬುರಗಿ ಜಿಲ್ಲಾಡಳಿತವು ಈಗಾಗಲೆ 83.52 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಕೇಂದ್ರ ಸರ್ಕಾರದ ಪ್ರವಾಸೋದ್ಯಮ ಇಲಾಖೆಗೆ "ಪ್ರಸಾದ" ಯೋಜನೆಯಡಿ ಪ್ರಸ್ತಾವನೆ ಸಲ್ಲಿಸಿರುವುದರಿಂದ ಸಮಿತಿ ಸದಸ್ಯೆ ಶಿವರಾಂ ಹೆಬ್ಬಾರ ಅವರ ಸಲಹೆಯಂತೆ ಕೇಂದ್ರ ಸರ್ಕಾರದ ಬಳಿ ಸಮಿತಿಯ ನಿಯೋಗ ತೆರಳಿ ಅನುದಾನ ಬಿಡುಗಡೆಗೆ ಮನವಿ ಸಲ್ಲಿಸಲು ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದರು.

ಹಿಂದೆ ಮುಜರಾಯಿ ಸಚಿವನಾಗಿದ್ದಾಗ ಒಮ್ಮೆ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದಿದ್ದೆ. ಕಳೆದ ಫೆಬ್ರವರಿ 24ಕ್ಕೆ ಸಮಿತಿಗೆ ಗಾಣಗಾಪೂರ ದೇವಸ್ಥಾನದಲ್ಲಿ ರಸ್ತೆ, ಮೂಲಸೌಕರ್ಯ ಕಲ್ಪಿಸಿಲ್ಲ ಎಂಬ ಅರ್ಜಿ ಸ್ವೀಕಾರವಾದ ಹಿನ್ನೆಲೆಯಲ್ಲಿ ಇಡೀ ಸಮಿತಿ ಪ್ರತ್ಯಕ್ಷವಾಗಿ ಕ್ಷೇತ್ರದ ದರ್ಶನ ಮಾಡಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಇಂದು ಜಿಲ್ಲೆಗೆ ಆಗಮಿಸಿದೆ ಎಂದರು.

ದತ್ತನ ಕ್ಷೇತ್ರಕ್ಕೆ ಲಕ್ಷಾಂತರ ಜನ ಬರುವುದರಿಂದ ಸ್ವಚ್ಛತೆ ಮತ್ತು



ನೈರ್ಮಲ್ಯ ತಡೆಯುವ ನಿಟ್ಟಿನಲ್ಲಿ ಒಳಚರಂಡಿ ನಿರ್ಮಾಣ ಮಾಡಬೇಕು, ನದಿ ಮಾಲಿನ್ಯ ತಡೆಯಬೇಕು, ಅತಿಕ್ರಮಣ ತೆರವುಗೊಳಿಸಬೇಕು ಎಂದು ಸಮಿತಿ ಸದ್ಯಸ್ಯ ಎಸ್.ಸುರೇಶ ಕುಮಾರ ಅಭಿಪ್ರಾಯಪಟ್ಟರು. ಇದಕ್ಕೆ ಸಹಮತಿ ವ್ಯಕ್ತಪಡಿಸಿದ ಸಮಿತಿ ಅಧ್ಯಕ್ಷ ರುದ್ರಪ್ಪ ಲಮಾಣಿ ಅವರು, ಒಳಚರಂಡಿ ನಿರ್ಮಾಣ ಆದ್ಯತೆ ಮೇಲೆ ಮಾಡಿ ಎಂದು ಅಧಿಕಾರಿಗಳಿಗೆ ತಿಳಿಸಿದರು. ಸದಸ್ಯ ಎಸ್.ಸುರೇಶಕುಮಾರ ಮಾತು ಮುಂದುವರೆಸಿ, ಹಣ ನೀಡಿದರೆ ಮಧ್ಯವರ್ತಿಗಳು ಬೇಗ ದರ್ಶನ ಕೊಡಿಸ್ತಾರಂತೆ, ಇದಕ್ಕೆ ಕಡಿವಾಣ ಹಾಕಲು ಏನು ಕ್ರಮ ಕೈಗೊಂಡೀರಿ ಎಂದು ದೇವಸ್ತಾನ ಕಾರ್ಯನಿರ್ವಾಹಕ ಅಧಿಕಾರಿ ಶಿವಕಾಂತಮ್ಮ ಅವರನ್ನು ಪ್ರಶ್ನಿಸಿದರು. ಭದ್ರತಾ ಸಿಬ್ಬಂದಿ ಹೆಚ್ಚಿಗೆ ನಿಯೋಜಿಸಲು ಕ್ರಮ ವಹಿಸಲಾಗಿದೆ ಎಂದು ಶಿವಕಾಂತಮ್ಮ ಉತ್ತರಿಸಿದರು.

ಸಮಿತಿ ಸದಸ್ಯರಾದ ಅರಬೈಲ್ ಶಿವರಾಂ ಹೆಬ್ಬಾರ್, ಸುರೇಶಬಾಬು ಸಿ.ಬಿ., ಎಸ್.ಟಿ.ಸೋಮಶೇಖರ, ಎ.ಸಿ.ಶ್ರೀನಿವಾಸ ಮಹೇಂದ್ರ ಕಲ್ಲಪ್ಪ ತಮ್ಮಣ್ಣನವರ ಅವರು ಚರ್ಚೆಯಲ್ಲಿ ಭಾಗವಹಿಸಿ ದತ್ತನ ದರ್ಶನಕ್ಕೆ ಆನ್ ಲೈನ್ ಬುಕ್ಕಿಂಗ್ ವ್ಯವಸ್ಥೆ ಜಾರಿಗೆ ತಂದು ಜನಸಂದಣಿ ತಡೆಯಬಹುದು. ದಾನಿಗಳ ನೆರವಿನಿಂದ ಅಥವಾ ಪ್ರವಾಸೋದ್ಯಮ ಇಲಾಖೆಯಿಂದ ಧಾರ್ಮಿಕ ಕ್ಷೇತ್ರ ಅಭಿವೃದ್ಧಿಪಡಿಸಬಹುದು. ದತ್ತನ ಕ್ಷೇತ್ರ ಸಮಗ್ರ ಅಭಿವೃದ್ಧಿಗೆ ಪ್ರತ್ಯೇಕ ಪ್ರಾಧಿಕಾರ ರಚಿಸಬೇಕು ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಹೆಲಿಪೋರ್ಟ್ ಸ್ಥಾಪಿಸುವುದು ಅವಶ್ಯಕ: ಸಭೆಯಲ್ಲಿ ಭಾಗವಹಿಸಿದ ಅಫಜಲಪೂರ ಶಾಸಕ ಎಂ.ವೈ.ಪಾಟೀಲ ಮಾತನಾಡಿ ದತ್ತನ ಕ್ಷೇತ್ರಕ್ಕೆ ಲಕ್ಷಾಂತರ ಜನ ದೇಶದ ವಿವಿಧ ರಾಜ್ಯಗಳಿಂದ ಬರುತ್ತಾರೆ. ವಿಶೇಷವಾಗಿ ದತ್ತನ ಜಯಂತಿಯಂದು ಜನಸಾಗರದಂತೆ ಭಕ್ತಾದಿಗಳು ಇಲ್ಲಿಗೆ ಹರಿದುಬರುವುದರಿಂದ ಇಲ್ಲಿನ ವ್ಯವಸ್ಥೆ ಕಂಡು ಅಧಿಕಾರಿ–ಜನಪ್ರತಿನಿಧಿ ಮೇಲೆ ಹಿಡಿಶಾಪ ಹಾಕುತ್ತಾರೆ. ಹೀಗಾಗಿ ಇಲ್ಲಿ ರಸ್ತೆ, ವಾಹನ ಪಾರ್ಕಿಂಗ್ ವ್ಯವಸ್ಥೆ ಮೊದಲಾದ್ಯತೆ ಮೇಲೆ ಸರಿಪಡಿಸಬೇಕಿದೆ. ದತ್ತನ ಕ್ಷೇತ್ರಕ್ಕೆ ನಿರು ಪೂರೈಸುವ ಬ್ಯಾರೇಜಿನಲ್ಲಿ ಸೋರಿಕೆ ತಡೆದು ಪುನರ್ ನವೀಕರಣ ಮಾಡಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಯಬೇಕಿದೆ. ಭದ್ರತೆ ದೃಷ್ಠಿಯಿಂದ ಪೊಲೀಸ್ ಠಾಣೆ ಇಲ್ಲಿ ಸ್ಥಾಪನೆಯಾಗಬೇಕು. ಭಕ್ತಾದಿಗಳು ಉಳಿದುಕೊಳ್ಳಲು ಸರ್ಕಾರಿ ಯಾತ್ರಿಕ ನಿವಾಸ ನಿರ್ಮಾಣವಾಗಬೇಕು. ಈಗಾಗಲೆ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆ ಎಂದರು.

ಅಲ್ಲದೆ ಅಕ್ಕಪಕ್ಕದ ರಾಜ್ಯಗಳ ಮಂತ್ರಿಗಳು, ಗಣ್ಯರು ಆಗಾಗ ಬಂದು ದತ್ತನ ದರ್ಶನ ಪಡೆದುಕೊಳ್ಳುತ್ತಾರೆ. ಇತ್ತೀಚೆಗೆ ಕೇಂದ್ರ ರಾಷ್ಟ್ರೀಯ ಹೆದ್ದಾರಿ ಸಚಿವ ನಿತೀನ್ ಗಡ್ಕರಿ ಸಹ ಆಗಮಿಸಿದ್ದರು. ಹೀಗಾಗಿ ಗಣ್ಯರ ಅನುಕೂಲಕ್ಕೆ ಇಲ್ಲಿ ಹೆಲಿಪೋರ್ಟ್ ಸ್ಥಾಪಿಸುವುದು ಅವಶ್ಯಕವಾಗಿದೆ ಎಂದು ಎಂ.ವೈ.ಪಾಟೀಲ ತಿಳಿಸಿದರು.

ಇದಕ್ಕೂ ಮುನ್ನ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಗಾಣಗಾಪುರ ಕ್ಷೇತ್ರ ಸಮಗ್ರ ಅಭಿವೃದ್ಧಿಗೆ 200 ಕೋಟಿ ರೂ. ವೆಚ್ಚದ ನೀಲಿ ನಕ್ಷೆ ಸಿದ್ಧಪಡಿಸಿದೆ. ಕೇಂದ್ರ ಸರ್ಕಾರದ "ಪ್ರಸಾದ" ಯೋಜನೆಯಡಿ ದತ್ತಾತ್ರೇಯನ ಕ್ಷೇತ್ರದಲ್ಲಿ ದೇವಸ್ಥಾನ ಆವರಣ, ಸಂಗಮ ಮತ್ತು ಅಷ್ಟ ತೀರ್ಥ ಸ್ಥಳಗಳ ಸಮಗ್ರ ಅಭಿವೃದ್ಧಿಗೆ 83.52 ಕೋಟಿ ರೂ. ಪ್ರಸ್ತಾವನೆ ಸಲ್ಲಿಸಿದೆ. ಇನ್ನು ದೇವಸ್ಥಾನದಲ್ಲಿ ಕಳೆದ 2014–15 ರಿಂದ 2023–24ರ ವರೆಗೆ ದೇವಸ್ಥಾನಕ್ಕೆ ಬಂದ 3.96 ಕೋಟಿ ರೂ. ಆದಾಯದಲ್ಲಿ ಮೂಲಸೌಕರ್ಯ, ಸಿಬ್ಬಂದಿ ವೇತನಕ್ಕಾಗಿ 1.98 ಕೋಟಿ ರೂ. ಖರ್ಚು ಮಾಡಿದೆ. 2016–17 ರಿಂದ ಇಲ್ಲಿಯವರೆಗೆ ಗಾಣಗಾಪುರದಲ್ಲಿ ಸಿ.ಸಿ.ರಸ್ತೆ, ಯಾತ್ರಿಕ ನಿವಾಸ, ಪಾರ್ಕಿಂಗ್, ಸಿ.ಸಿ.ಡ್ರೇನ್ ಹೀಗೆ ಸುಮಾರು 24 ಮೂಲಸೌಕರ್ಯ ಕಾಮಗಾರಿಗಳಿಗೆ 1.62 ಕೋಟಿ ರೂ. ಖರ್ಚು ಮಾಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಶೂನ್ಯ ಅರ್ಕಿಟೆಕ್ಟ್ ಸಂಸ್ಥೆಯ ಮಲ್ಯಾ ಅವರು ದೇವಸ್ಥಾನ ಅಭಿವೃದ್ಧಿ ಸಿದ್ಧಪಡಿಸಿರುವ ಮಾಸ್ಟರ್ ಪ್ಲಾನ್ ಪ್ರಾತ್ಯಕ್ಷಿಕೆ ಮೂಲಕ ಸಮಿತಿಗೆ ಯೋಜನೆಯ ವಿವರವನ್ನು ಹಾಜರುಪಡಿಸಿದರು.

ಸಭೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯ ಆಯುಕ್ತ ಬಸವರಾಜೇಂದ್ರ ಹೆಚ್., ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಪ್ರೊಬೇಷನರ್ ಐ.ಎ.ಎಸ್. ಅಧಿಕಾರಿ ಮೀನಾಕ್ಷಿ ಆರ್ಯ, ಸಹಾಯಕ ಆಯುಕ್ತ ಆಶಪ್ಪ ಪೂಜಾರಿ, ಅಫಜಲಪುರ ತಹಶೀಲ್ದಾರ ಸಂಜೀವಕುಮಾರ ದಾಸರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

**ದತ್ತನ ಕ್ಷೇತ್ರಕ್ಕೆ ಭೇಟಿ:** ಸಭೆಯ ನಂತರ ರುದ್ರಪ್ಪ ಲಮಾಣಿ ಅಧ್ಯಕ್ಷತೆಯ ಕರ್ನಾಟಕ ವಿಧಾನಸಭೆ ಅರ್ಜಿ ಸಮಿತಿಯು ದತ್ತಾತ್ರೇಯ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದಿದ್ದಲ್ಲದೆ ಅಲ್ಲಿನ ಮೂಲಸೌಕರ್ಯ ಕುರಿತು ಅಧಿಕಾರಿಗಳೊಂದಿಗೆ ಪರಿಶೀಲಿಸಿದರು.

## ಮಣ್ಣೆತ್ತಿನ ಅಮಾವಾಸ್ಯೆಗೆ ಸಜ್ಜಾದ ಮಣ್ಣೆತ್ತುಗಳು



ಸಿರುಗುಪ್ಪ:–

ಮುಂಗಾರು ಮಳೆ ಆರಂಭವಾದರೆ ರೈತರಿಗೆ ಹಬ್ಬದ ದಿನಗಳು ಆರಂಭವಾದಂತೆ. ಮುಂಗಾರು ಬಿತ್ತನೆಯ ಕೆಲಸ ಮುಗಿಯುತ್ತಿದ್ದಂತೆ ರೈತರು, ಹಬ್ಬಗಳ ಆಚರಣೆ ಆರಂಭಿಸುತ್ತಾರೆ. ಕಳೆದ ಕೆಲ ದಿನಗಳ ಹಿಂದೆಯಷ್ಟೇ ಕಾರಹುಣ್ಣಿಮೆಯನ್ನು ಆಚರಿಸಿರುವ ರೈತ ಬಾಂಧವರು ಇದೀಗ ಮಣ್ಣೆತ್ತಿನ ಅಮಾವಾಸ್ಯೆಯ ಆಚರಣೆಗೆ ಸಜ್ಜಾಗುತ್ತಿದ್ದಾರೆ. ನಗರದಲ್ಲಿ ಮತ್ತು ತಾಲ್ಲೂಕಿನ ತೆಕ್ಕಲಕೋಟೆ ಪಟ್ಟಣ ಹಾಗೂ ವಿವಿಧ ಗ್ರಾಮದ ಮಾರುಕಟ್ಟೆಯಲ್ಲಿ ಮಣ್ಣೆತ್ತಿನ ಅಮಾವಾಸ್ಯೆ ನಿಮಿತ್ತ ಮಣ್ಣೆತ್ತುಗಳ ಮಾರಾಟ ಭರ್ಜರಿಯಾಗಿ ನಡೆಯುತ್ತಿದೆ. ನಾಳೆ ಮಣ್ಣೆತ್ತಿನ ಅಮಾವಾಸ್ಯೆ ಅಂಗವಾಗಿ ರೈತರು ಸೇರಿದಂತೆ ಸಾರ್ವಜನಿಕರು ಮಣ್ಣೆತ್ತಿನ ಗೊಂಬೆಗಳನ್ನು ಖರೀದಿಸು ತ್ತಿದ್ದಾರೆ. ಇಲ್ಲಿನ ಚಿತ್ರಗಾರ, ಕುಂಬಾರ ಸಮುದಾಯದ ಕೆಲವರು ಮಣ್ಣಿನಿಂದ ಎತ್ತುಗಳನ್ನು ತಯಾರಿಸಿ ಮಾರಾಟ ಮಾಡುತ್ತಿದ್ದಾರೆ. ಇಲ್ಲಿನ ಕಲಾವಿದರು ಮಣ್ಣಿನಿಂದ ಎತ್ತುಗಳನ್ನು ತಯಾರಿಸಲು ಸ್ಥಳೀಯವಾಗಿ ಉತ್ತಮ ಮಣ್ಣನ್ನು ತಂದು ಎತ್ತುಗಳನ್ನು ತಯಾರಿಸುತ್ತಾರೆ. ಗೊಂಬೆಗಳನ್ನು ತಯಾರಿ ಸಲು ಮಣ್ಣನ್ನು ಜರಡಿ ಹಿಡಿದು, ಸಣ್ಣನೆ ಮಣ್ಣನ್ನು ಕೆಲ ದಿನಗಳವರೆಗೆ ನೆನೆ ಹಾಕಿ, ನಂತರ ಹತ್ತಿಯನ್ನು ಮಣ್ಣಿನ ಜತೆ ಬೆರಸಿ, ಕುಟ್ಟುತ್ತಾರೆ. ಹದವಾದ ಮಣ್ಣಿನಿಂದ ಎತ್ತುಗಳನ್ನು ತಯಾರಿಸುತ್ತಾರೆ. ನಂತರ ತೈಲ ವರ್ಣದಿಂದ ಎತ್ತುಗಳ ಕಣ್ಣು, ವಿಭೂತಿ ಮುಂತಾದವುಗಳನ್ನು ಚಿತ್ರಿಸುತ್ತಾರೆ. ಸುಂದ ರವಾದ ಬಣ್ಣದ ಮಣ್ಣೆತ್ತುಗಳನ್ನು ಜೋಡಿಗೆ ರೂ.60 ಮಾರಾಟ ಮಾಡುತ್ತಾರೆ. ಇಲ್ಲಿನ ಚಿತ್ರಗಾರ ಮಹೇಂದ್ರ ಈ ಕುರಿತು ಮಾತನಾಡಿ, ಹಲವು ವರ್ಷಗಳಿಂದ ಮಣ್ಣೆತ್ತುಗಳನ್ನು ಮಾರಾಟ ಮಾಡುತ್ತಿದ್ದು, ಇದರಲ್ಲಿ ನಮಗೆ ಅಷ್ಟೇನು ಲಾಭವಿಲ್ಲ ಎಂದರು. ರೈತಾಪಿ ವರ್ಗಕ್ಕೆ ಎತ್ತುಗಳೇ ದೇವರ ಸ್ವರೂಪಿಗಳಾಗಿವೆ. ಕಾಯಕದಲ್ಲಿ ತೊಡಗುವ ಎತ್ತುಗಳನ್ನೇ ದೇವರ ರೂಪದಲ್ಲಿ ಪೂಜೆ ಮಾಡುವ ಸಂಪ್ರದಾಯ ಹಿಂದಿನಿಂದಲೂ ನಡೆದು ಬಂದಿದೆ. ಕಾರು ಹುಣ್ಣಿಮೆಯಲ್ಲಿ ಎತ್ತುಗಳನ್ನು ಅದ್ದೂರಿಯಿಂದ ಮೆರವಣಿಗೆ ಮಾಡಿದರೆ, ಮಣ್ಣೆತ್ತಿನ ಅಮಾವಾಸ್ಯೆಯ ವೇಳೆ ಮಣ್ಣಿನ ಎತ್ತುಗಳನ್ನು ಪೂಜೆ ಮಾಡಿ ಸಂಜೆ ವೇಳೆ ಭಕ್ತಿಯಿಂದಲೇ ನದಿತಟಗಳಿಗೆ ವಿಸರ್ಜನೆ ಮಾಡುವ ಸಂಪ್ರದಾಯವಿದೆ.

## ಹಿಂದೂ ಕಾರ್ಯಕರ್ತರ ಮೇಲೆ ಹಲ್ಲೆ: ಆರೋಪಿಗಳ ಬಂಧನಕ್ಕೆ ಆಗ್ರಹಿಸಿ ಪ್ರತಿಭಟನೆ




ಕಲಬುರಗಿ:–

ತಾಲ್ಲೂಕಿನ ಇಟಗಾ ಗ್ರಾಮದಲ್ಲಿ ಹಿಂದೂ ಕಾರ್ಯಕರ್ತರ ಮೇಲೆ ಅನ್ಯ ಕೋಮಿನ ಜನರು ಹಲ್ಲೆ ಮಾಡಿದ್ದು, ಕೂಡಲೇ ಆರೋಪಿಗಳನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಗುರುವಾರ ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ರಾಷ್ಟ್ರ ರಕ್ಷಣಾ ಪಡೆಯ ಕಾರ್ಯಕರ್ತರು ಪ್ರತಿಭಟನಾ ಪ್ರದರ್ಶನ ಮಾಡಿದರು. ಪ್ರತಿಭಟನೆಕಾರರು ನಂತರ ನಗರ ಪೊಲಿಸ್ ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಿ, ತಾಲ್ಲೂಕಿನ ಇಟಗಾ ಗ್ರಾಮದ ಹಿಂದೂ ಕಾರ್ಯಕರ್ತ ಭೀಮು ದಾಸರ್ ಅವರ ಮೇಲೆ ಅನ್ಯ ಕೋಮಿನ ಜನ ಹಲ್ಲೆ ಮಾಡಿದವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು. ಕಳೆದ ಜುಲೈ 1ರಂದು ತಾಲ್ಲೂಕಿನ ಇಟಗಾ(ಅ) ಗ್ರಾಮದಲ್ಲಿ ಮದುವೆ ಕಾರ್ಯಕ್ರಮದ ಮೆರವಣಿಗೆಯಲ್ಲಿ ಶ್ರೀ ರಾಮನ ಹಾಡುಗಳನ್ನು ಹಾಕಿ ನೃತ್ಯ ಮಾಡುತ್ತಿರುವ ಸಮಯದಲ್ಲಿ ಅನ್ಯ ಕೋಮಿನ ವ್ಯಕ್ತಿಗಳು ಹಿಂದೂ ಕಾರ್ಯಕರ್ತ ಭೀಮು ದಾಸರ್ ಅವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದು ಖಂಡನೀಯ ಎಂದು ಅವರು ಹೇಳಿದರು. ಹಿಂದೂ ಕಾರ್ಯಕರ್ತನ ಮೇಲೆ ಹಲ್ಲೆ ಮಾಡಿರುವ ಅನ್ಯ ಕೋಮಿನ ಜನರನ್ನು ಕೂಡಲೇ ಬಂಧಿಸಿ ಅವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಮತ್ತು ಹಿಂದೂ ಕಾರ್ಯಕರ್ತನ ಮೇಲೆ ಮಾಡಿರುವ ಹಲ್ಲೆಗೆ ಸೂಕ್ತ ಚಿಕಿತ್ಸೆ ಒದಗಿಸುವುದರ ಜೊತೆಗೆ ಅವರ ಕುಟುಂಬಕ್ಕೆ ಸೂಕ್ತ ಪೊಲೀಸ ಭದ್ರತೆ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು. ಸಂಘಟನೆಯ ಜಿಲ್ಲಾಧ್ಯಕ್ಷ ಮಡಿವಾಳಪ್ಪ ಅಮರಾವತಿ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಹೇಶ್ ಗೊಬ್ಬೂರ್, ಅಂಬು ಕಂಬಾರಾಯ್, ರಾಕೇಶ್ ಜಮಾದಾರ್, ಮುಂತಾದವರು ಪಾಲ್ಗೊಂಡಿದ್ದರು.

## ವಿವಿಎನ್ ಶಾಲೆಯಲ್ಲಿ ವಿದ್ಯಾರ್ಥಿ ಪರಿಷತ್ ಸದಸ್ಯರ ಪ್ರಮಾಣ ವಚನ ಸ್ವೀಕಾರ

ಕಲಬುರಗಿ:–

ದೇಶದ ಅಭಿವೃದ್ಧಿಯು ಮಾನವೀಯ ಮೌಲ್ಯಗಳನ್ನು ಹೊಂದಿದ, ನಿಸ್ವಾರ್ಥ ನಾಯಕರಿಂದ ಮಾತ್ರ ಸಾಧ್ಯ. ಇಂದಿನ ವಿದ್ಯಾರ್ಥಿ ನಾಯಕರು ಆ ನಿಟ್ಟಿನಲ್ಲಿ ಯೋಚಿಸಿ ಭವಿಷ್ಯದಲ್ಲಿ ಅಂತಹ ಸಾಮಾಜಿಕ ಜವಾಬ್ದಾರಿ ತೆಗೆದುಕೊಳ್ಳಬೇಕು, ಎಂದು ಪ್ರೊ. ಆರ್. ಕೆ. ಹುಡಗಿ ಅಭಿಪ್ರಾಯ ಪಟ್ಟರು. ನಗರದ ವಿವೇಕಾನಂದ ವಿದ್ಯಾ ನಿಕೇತನ ಶಾಲೆಯಲ್ಲಿ ಚುನಾಯಿತ, ವಿದ್ಯಾರ್ಥಿ ಪರಿಷತ್ ಸದಸ್ಯರ ಪ್ರಮಾಣ ವಚನ ಸ್ವೀಕಾರ ಸಮಾರಂಭದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಪ್ರೊ. ಆರ್. ಕೆ. ಹುಡುಗಿ ಮಕ್ಕಳನ್ನುದ್ದೇಶಿಸಿ ಮಾತನಾಡುತ್ತ, ಮಕ್ಕಳಿಗೆ ಛಲವಿರಬೇಕು, ಶಾಲಾ ದಿನಗಳಿಂದಲೇ ವಿದ್ಯಾರ್ಥಿಗಳು ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕು, ಅವರಿಗೆ ಅಸಾಧ್ಯವಾದದ್ದು ಯಾವುದು ಇಲ್ಲ, ಎಂದರು.

ಕಾರ್ಯಕ್ರಮದ ಅದ್ಯಕ್ಷತೆಯನ್ನು ವಹಿಸಿದ್ದ ಶಾಲೆಯ ಪ್ರಿನ್ಸಿಪಾಲ್ ಸಿದ್ದಪ್ಪ ಭಗವತಿ ಮಾತನಾಡಿ, ದೇಶದ ಅಭಿವೃದ್ಧಿಗೆ ಉತ್ತಮ ನಾಯಕರ ಅಗತ್ಯವಿದೆ. ನಿಮ್ಮ ಭವಿಷ್ಯವನ್ನು ಉಜ್ವಲಗೊಳಿಸಲು ನೀವೇ ಆ ಜವಾಬ್ದಾರಿ ತೆಗೆದುಕೊಳ್ಳಬೇಕು, ವಿಶೇಷವಾಗಿ



ವಿದ್ಯಾರ್ಥಿನಿಯರು ಭವಿಷ್ಯದಲ್ಲಿ ವಿಧಾನ ಸಭೆ, ಲೋಕಸಭೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿನಿಧಿಸಿ ಉತ್ತಮ ಕಾನೂನುಗಳನ್ನು ರಚಿಸಬೇಕು ಎಂದರು.

ಕಳೆದ ವಾರ ನಡೆದ ಚುನಾವಣೆಯಲ್ಲಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ನೀಡಿದ ಮತಗಳ ಆಧಾರದ ಮೇಲೆ ವಿವಿಧ ಹುದ್ದೆಗಳಿಗೆ ನಾಯಕರನ್ನು ಆಯ್ಕೆ ಮಾಡಲಾಯಿತು. ಶಾಲೆಯ ನಾಯಕರಾಗಿ ಹತ್ತನೇ ತರಗತಿಯ ಭೂಮಿಕಾ ದತ್ತಾತ್ರಿ ಹಾಗೂ ಶ್ರೇಯಸ್. ಎಸ್.ಎಮ್ ಅಧಿಕಾರ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯಗುರು ಅಂಬಿಕಾ ರೆಡ್ಡಿ, ಶೈಕ್ಷಣಿಕ ಸಂಯೋಜಕರಾದ ನಿಖಿಲ್ ಪಾಟೀಲ್, ಸುಮಾ ಭಗವತಿ, ಸುಷ್ಮಾ ಭಗವತಿ ಹಾಗೂ ಶಿಕ್ಷಕರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಸಿಂಚನಾ ಸ್ವಾಗತಿಸಿದರು, ಗಂಧರ್ವ ವಂದಿಸಿದರು. ರಕ್ಷಿತ್ ನಿರೂಪಿಸಿದರು.

## ಪೊಲಿಸ್ ಠಾಣೆಯಲ್ಲಿ ಪರಿಸರ ಪ್ರೇಮ ರಾಜ್ಯಕ್ಕೆ ಮಾದರಿಯಾಗಲಿ– ಟಿ.ಎಂ. ಶಿವಕುಮಾರ

ಸಂಡೂರು:–

ಸಂಡೂರು ತಾಲೂಕಿನಲ್ಲಿ ಚೋರನೂರು ಗ್ರಾಮದಲ್ಲಿ ಪೊಲಿಸ್ ಠಾಣೆಯಲ್ಲಿ ಸಸಿನೆಡುವ ಕಾರ್ಯಕ್ರಮವನ್ನು ಆಚರಿಸಲಾಯಿತು. ಹಿರಿಯ ವಕೀಲರ ಟಿ.ಎಂ. ಶಿವಕುಮಾರ ಕಾರ್ಯಕ್ರಮ ಉದ್ಘಾಟಿಸಿ ಇಂತಹ ಪರಿಸರ ಪ್ರೇಮಿಯ ಪೊಲೀಸ್ ಠಾಣೆಯನ್ನು ನೋಡುತ್ತಿರುವುದು ಹೆಮ್ಮೆಯ ವಿಷಯ ಇದು ರಾಜ್ಯಕ್ಕೆ ಮಾದರಿಯಾಗಿ, ಮಾದರಿ ಪೊಲೀಸ್ ಠಾಣೆಯಾಗಲಿ ಎಂದು ತಮ್ಮ ಮನದಾಳದ ಮಾತುಗಳನ್ನಾಡಿದರು.

ಠಾಣೆಯ ಪಿ.ಎಸ್.ಐ. ರೇವಣಸಿದ್ದಯ್ಯ ಅವರನ್ನು ವಾಸವಿ ಸಂಘದ ವತಿಯಿಂದ ಸಾಧಕರಿಗೆ ಸನ್ಮಾನದ ಅಡಿಯಲ್ಲಿ ಅವರನ್ನು ಸನ್ಮಾನಿಸಿದರು, ಸನ್ಮಾನ ಸ್ವೀಕರಿಸಿ ಪಿ.ಎಸ್.ಐ. ರೇವಣಸಿದ್ದಯ್ಯ.ಜೆ.ಎಂ. ಅವರು ಮಾತನಾಡಿ



ಸುಮಾರು 50 ರಿಂದ 100 ಸಸಿಗಳನ್ನು ಬೆಳೆಸುವ ಒಂದು ಪ್ರಕ್ರಿಯೆಯನ್ನು ಮುಂದುವರಿಸಿಕೊಂಡು ಹೋಗಿ ಇದನ್ನು ಉನ್ನತ ಮಟ್ಟಕ್ಕೆ ತೆಗೆದುಕೊಂಡು ಹೋಗುವುದಾಗಿ ಹೇಳಿದರು ಅಲ್ಲದೆ ಒಬ್ಬ ವಕೀಲರು ಸಂಘ ಸಂಸ್ಥೆಗಳೊಡನೆ ಮುನ್ನಡೆಸಿಕೊಂಡು ಈ ಒಂದು ಐತಿಹಾಸಿಕ ಕಾರ್ಯಕ್ರಮವನ್ನು ನಿರ್ಮಾಣ ಮಾಡುತ್ತಾ ಒಂದು ಹತ್ತು ವರ್ಷಗಳಲ್ಲಿ 13,500 ಸಸಿಗಳನ್ನು ಮತ್ತು ಬೀಜದ ಉಂಡೆಗಳನ್ನು ಪರಿಸರಕ್ಕೆ ಸಮರ್ಪಿಸಿರುವ ಕಾರ್ಯಕ್ಕೆ ಧನ್ಯವಾದ ಎಲ್ಲರ ಸಹಕಾರ, ಪೊಲೀಸ್ ಠಾಣಾಧಿಕಾರಿ ಸಿಬ್ಬಂದಿ ವರ್ಗಕ್ಕೂ ಹಾಗೂ ಸಾರ್ವಜನಿಕರಿಗೂ ಪೊಲೀಸ್ ಇಲಾಖೆಯವರಿಗೂ ಸರ್ವರೂ ಕೈಜೋಡಿಸುವ ಮೂಲಕ ಪರಿಸರ ಉಳಿಸಿ ಹಸಿರು ಬೆಳೆಸಿ ಎಂದರು. ಪರಿಸರ ಜೀವಿಗಳ ಅವಿಭಾಜ್ಯ ಅಂಗವಾಗಿದೆ ಅದನ್ನು ಕಡ್ಡಾಯವಾಗಿ ರಕ್ಷಿಸಬೇಕು ಇಲ್ಲವಾದಲ್ಲಿ ಜೀವ ಸಂಕುಲದ ಅವನತಿ ಹೊಂದುತ್ತದೆ, ಈಗಾಗಲೇ ದೆಹಲಿಯಂತಹ ಪ್ರದೇಶದಲ್ಲಿ ಉಂಟಾಗಿರುವ ಸಮಸ್ಯೆಯೇ ಉದಾಹರಣೆಯಾಗಿದೆ ಎಂದು ವಕೀಲರ ಸಂಘದ ಅಧ್ಯಕ್ಷ ಅರಳಿಮಲ್ಲಪ್ಪ ತಿಳಿಸಿದರು. ಅವರು ತಾಲೂಕಿನ ಚೋರನೂರು ಗ್ರಾಮದಲ್ಲಿ ಪೊಲೀಸ್ ಠಾಣೆಯಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಆರ್ಯ ವೈಶ್ಯ ಸಂಘ, ವಾಸವಿಫೌಂಡೇಷನ್, ವೃಂದಾ ಪ್ರಕಾಶನ ಸಹಯೋಗದಲ್ಲಿ ನಡೆಸಿದರು ಹಿಂದಿನ ಬಾರಿ ಬೀಜದುಂಡೆಗಳನ್ನು ವಿತರಣೆ ಹಾಗೂ ಬಿತ್ತುವಿಕೆ ನಡೆಸಿದರು, ಇದಕ್ಕೆ ವೃಂದಪ್ರಕಾಶನ, ಅರ್ಯವೈಶ್ಯ ಸಂಘ, ವಾಸವಿ ಸಂಘ ಸಹಯೋಗದಲ್ಲಿ ಇನ್ನೂ ಹೆಚ್ಚು ನಡೆಯಲಿ ಎಂದರು.

Editor:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Publisher:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Printer:S.K.Wadeyar, SUCHITHRA PRINTERs & PUBLISHERs # 69 "VISPATHI",B,Block S.O.G.Colony Davanagere-577005,Karnataka
Owner:S.K.Wadeyar, #69 "VISPATHI", B,Block S.O.G.Colony, Davanagere-577005,Karnataka